# ಕರಾವಳಿ ತರಂಗಿಣಿ

ಕಡಲ ಕಿನಾರೆಯಿಂದ ಕೆಂಪು ಕೋಟೆಯವರೆಗೆ..

ಕನ್ನಡ ವಾರಪತ್ರಿಕೆ


**ಸುಭಾಷಿತ:**

ಕಷ್ಟ ಬಂದೆಂದು ಅತ್ತರೆ ನಾಟಕ ಎನ್ನುವರು
ಸುಖದಲ್ಲಿದ್ದೇನೆಂದು ನಕ್ಕರೆ ಹುಚ್ಚ ಎನ್ನುವರು
ಗೌರವಕ್ಕಾಗಿ ಮೌನವಾದರೆ ತಕ್ಕತಕ್ಕ ಎನ್ನುವರು
ಪರರಿಗೆ ನೆರವಾದರೆ ಅಧಿಕಪ್ರಸಂಗಿ ಎನ್ನುವರು
ಸಹವಾಸ ಸಾಕೆಂದರೆ ಅಹಂಕಾರಿ ಎನ್ನುವರು
ಸತ್ತವರನ್ನು ಬದುಕಿಸುವಂತೆ ಮಾಡುವರು
ಬದುಕಿದವರನ್ನು ಸಾಯಿಸಿಯೇ ಬಿಡುವರು
ಇದ್ದಾಗ ನಗುವರು.. ಹೋದಾಗ ಅಳುವರು
ಇದೆಲ್ಲವ ಬಿಟ್ಟು ಬಾಳಿದರೆ ಮನುಜನಾಗುವರು..

**ಭಗವಾನ್ ಶ್ರೀಕೃಷ್ಣ**




PRGI No: KNKAN/25/A2498 www.karavalitharangini.com KARAVALI THARANGINI KANNADA Weekly Dakshina Kannada ದಿನಾಂಕ: 15-05-2026 to 21-05-2026 ಬೆಲೆ:10-00 ಸಂಪುಟ–1 ಸಂಚಿಕೆ–33 ಪುಟಗಳು–6



KANFIDA

ಕರ್ನಾಟಕ ಚಲನಚಿತ್ರ ನಿರ್ದೇಶಕರ ಸಂಘ(ರಿ)

ಇದು ಎಸ್ ಆರ್ ಪುಟ್ಟಣ್ಣ ಕಣಗಾಲ್ ಅವರು ಮತ್ತು ಹಿರಿಯ ನಿರ್ದೇಶಕರು ಕಟ್ಟಿರುವ ಸಂಸ್ಥೆ



ಬನ್ನಿ ಚಲನಚಿತ್ರ ನಿರ್ದೇಶಕರೇ ಸದಸ್ಯರಾಗೋಣ

KARNATAKA FILM DIRECTOR'S ASSOCIATION (R)
No-10, 'A' 1st Floor, N S Bhavan, 4th cross, 4th main, Gandhinagar, Bangaloru-560009
Phone: 080-48664455 mob- 74111 96766
email: kanfida2023@gmail.com

ಕನ್ನಡ ಬಳಸಿ ಚಿತ್ರರಂಗ ಉಳಿಸಿ

ಕ್ಷಣ ಕ್ಷಣದ ಸುದ್ದಿಗಳಿಗಾಗಿ
ಕರಾವಳಿ ತರಂಗಿಣಿ
ಪತ್ರಿಕಾ ಬಳಗದಿಂದ
ಅಂತರ್ಜಾಲ ಮಾಧ್ಯಮ

www.karavalitharangini.com

ಕರಾವಳಿ ತರಂಗಿಣಿ
ಮಂಗಳೂರು




ಇಂದಿನ ಡಿಜಿಟಲ್ ಯುಗದಲ್ಲಿ ತಂತ್ರಜ್ಞಾನ ಬೆಳೆದಂತೆ ಸೈಬರ್ ಅಪರಾಧಗಳೂ ಹೆಚ್ಚುತ್ತಿವೆ. ಕೃತಕ ಬುದ್ಧಿಮತ್ತೆಯಂತಹ ಹೊಸ ತಂತ್ರಜ್ಞಾನಗಳು ವಂಚಕರಿಗೆ ವರದಾನವಾಗುತ್ತಿವೆ. ಅನಾಮಧೇಯ ಲಿಂಕ್‌ಗಳನ್ನು ಕ್ಲಿಕ್ ಮಾಡುವುದು, ಒಟಿಪಿ ಹಂಚಿಕೊಳ್ಳುವುದು ಅಥವಾ ಅಪರಿಚಿತ ಆಪ್‌ಗಳನ್ನು ಇನ್‌ಸ್ಟಾಲ್ ಮಾಡುವುದು ಅಪಾಯಕಾರಿ. ಲಾಟರಿ ಆಸೆ ಅಥವಾ ಬ್ಯಾಂಕ್ ಕೆವೈಸಿ ಹೆಸರಿನಲ್ಲಿ ಬರುವ ಕರೆಗಳಿಗೆ ಮರುಳಾಗಬೇಡಿ. ಸೈಬರ್ ಸುರಕ್ಷತೆಯ ಬಗ್ಗೆ ಅರಿವು ಇರಲಿ, ನಮ್ಮ ವೈಯಕ್ತಿಕ ಮಾಹಿತಿ ಮತ್ತು ಹಣಕಾಸಿನ ವಿವರಗಳನ್ನು ಗೌಪ್ಯವಾಗಿಡಿ. ವಂಚನೆಗೊಳಗಾದಲ್ಲಿ ತಕ್ಷಣ 1930 ಸಂಖ್ಯೆಗೆ ಕರೆ ಮಾಡಿ ದೂರು ನೀಡಿ. ಜಾಗೃತಿಯೇ ಸೈಬರ್ ವಂಚನೆಗೆ ಇರುವ ಏಕೈಕ ಮದ್ದು.

# ಆರ್ಥಿಕ ಶಿಸ್ತಿಗೆ ಪ್ರಧಾನಿ ಮಂತ್ರ..?



**ಬೆಂಗಳೂರು:** ಪಶ್ಚಿಮ ಏಷ್ಯಾದಲ್ಲಿ ಉಲ್ಬಣಗೊಂಡಿರುವ ಇರಾನ್ ಮತ್ತು ಅಮೆರಿಕಾ ನಡುವಿನ ಸಂಘರ್ಷವು ಜಾಗತಿಕ ಮಾರುಕಟ್ಟೆಯಲ್ಲಿ ಭಾರಿ ಏರುಪೇರು ಉಂಟುಮಾಡಿದ್ದು, ಇದರ ನೇರ ಪರಿಣಾಮ ಭಾರತೀಯ ರೂಪಾಯಿ ಮೌಲ್ಯದ ಮೇಲೆ ಬೀರಿದೆ. ಸತತವಾಗಿ ಕುಸಿಯುತ್ತಿರುವ ರೂಪಾಯಿಯನ್ನು ರಕ್ಷಿಸಲು ಮತ್ತು ವಿದೇಶಿ ವಿನಿಮಯ ಮೀಸಲನ್ನು ಉಳಿಸಿಕೊಳ್ಳಲು ಪ್ರಧಾನಿ ನರೇಂದ್ರ ಮೋದಿ ಅವರು ದೇಶವಾಸಿಗಳಲ್ಲಿ ವಿಶೇಷ ಮನವಿ ಮಾಡಿದ್ದಾರೆ. ಭಾರತೀಯರು ಸದ್ಯಕ್ಕೆ ವಿದೇಶಿ ಪ್ರವಾಸಗಳನ್ನು ಕೈಬಿಟ್ಟು, ಸ್ವದೇಶಿ ಪ್ರವಾಸೋದ್ಯಮಕ್ಕೆ ಆದ್ಯತೆ ನೀಡಬೇಕು **3ನೇ ಪುಟಕ್ಕೆ**

# ಪ್ರಧಾನಿ ಕರೆಗೆ ದೊಡ್ಡಗೌಡರ ಸಾಥ್

**ಬೆಂಗಳೂರು:** ಪ್ರಧಾನಿ ನರೇಂದ್ರ ಮೋದಿ ಅವರು ದೇಶದ ರೂಪಾಯಿ ಮೌಲ್ಯ ರಕ್ಷಣೆಗಾಗಿ ಮತ್ತು ಆರ್ಥಿಕ ಸ್ಥಿರತೆಗಾಗಿ ದೇಶವಾಸಿಗಳಲ್ಲಿ ಮಾಡಿರುವ ಮನವಿಯನ್ನು ಮಾಜಿ ಪ್ರಧಾನಿ ಎಚ್.ಡಿ. ದೇವೇಗೌಡರು ಮುಕ್ತವಾಗಿ ಸ್ವಾಗತಿಸಿದ್ದಾರೆ. “ದೇಶವು ಆರ್ಥಿಕ ಸಂಕಷ್ಟ ಎದುರಿಸುತ್ತಿರುವಾಗ ಪಕ್ಷಾತೀತವಾಗಿ ನಾವೆಲ್ಲರೂ ಸರ್ಕಾರದ ಬೆಂಬಲಕ್ಕೆ ನಿಲ್ಲಬೇಕಿದೆ” ಎಂದು ಅವರು ಹೇಳಿದ್ದಾರೆ. ಬೆಂಗಳೂರಿನ ಪದ್ಮನಾಭನಗರದ ತಮ್ಮ ನಿವಾಸದಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, “ಪಶ್ಚಿಮ ಏಷ್ಯಾದ ಯುದ್ಧದ ಪರಿಸ್ಥಿತಿಯಿಂದಾಗಿ ಜಾಗತಿಕವಾಗಿ ತೈಲ ಬೆಲೆ ಏರಿಕೆಯಾಗುತ್ತಿದೆ ಮತ್ತು ರೂಪಾಯಿ ಮೌಲ್ಯ ಕುಸಿಯುತ್ತಿದೆ. ಇಂತಹ ಸಮಯದಲ್ಲಿ ವಿದೇಶಿ ಪ್ರವಾಸಗಳನ್ನು ಕೈಬಿಟ್ಟು ಸ್ವದೇಶಿ ಪ್ರವಾಸಕ್ಕೆ ಒತ್ತು ನೀಡಬೇಕು ಎಂಬ ಪ್ರಧಾನಿಯವರ ಮಾತು ಅತ್ಯಂತ ಸಮಯೋಚಿತವಾಗಿದೆ. **3ನೇ ಪುಟಕ್ಕೆ**



# ವೈದ್ಯಕೀಯ ಕನಸಿಗೆ ಸೋರಿಕೆ ಕಂಟಕ..!

**ಬೆಂಗಳೂರು:** ದೇಶದ ಪ್ರತಿಷ್ಠಿತ ವೈದ್ಯಕೀಯ ಪ್ರವೇಶಾತಿ ಪರೀಕ್ಷೆಯಾದ ನೀಟ್-ಯುಜಿ ಪ್ರಶ್ನೆಪತ್ರಿಕೆ ಸೋರಿಕೆ ಹಗರಣವು ಈಗ ರಾಷ್ಟ್ರಮಟ್ಟದಲ್ಲಿ ಭಾರಿ ಸಂಚಲನ ಮೂಡಿಸಿದೆ. ಪರೀಕ್ಷಾ ವ್ಯವಸ್ಥೆಯ ಪಾರದರ್ಶಕತೆಯ ಬಗ್ಗೆ ಗಂಭೀರ ಪ್ರಶ್ನೆಗಳು ಎದ್ದಿರುವ ಹಿನ್ನೆಲೆಯಲ್ಲಿ ಕೇಂದ್ರ ಸರ್ಕಾರವು ಪರೀಕ್ಷೆಯನ್ನು ರದ್ದುಗೊಳಿಸಿರುವ ನಿರ್ಧಾರವು ದೇಶಾದ್ಯಂತ ಆಕ್ರೋಶಕ್ಕೆ ಕಾರಣವಾಗಿದೆ. ಸುಮಾರು 22 ಲಕ್ಷ ವಿದ್ಯಾರ್ಥಿಗಳು ವರ್ಷಗಟ್ಟಲೆ ನಡೆಸಿದ ಶ್ರಮ ಈಗ ನೀರಿನಲ್ಲಿ ಹೋಮ ಮಾಡಿದಂತಾಗಿದ್ದು, ಇಡೀ **3ನೇ ಪುಟಕ್ಕೆ**










# ವೈದ್ಯಕೀಯ ಕನಸಿಗೆ ಸೋರಿಕೆ ಕಂಟಕ..!

**ಒಂದನೇ ಪುಟದಿಂದ......**

ಶಿಕ್ಷಣ ವ್ಯವಸ್ಥೆಯೇ ತಲ್ಲಣಗೊಂಡಿದ್ದು, ಅಮಾಯಕರಿಗೂ ಶಿಕ್ಷೆ ಆಗುವಂತಾಗಿದೆ. ಈ ಹಗರಣದ ಗಂಭೀರತೆಯನ್ನು ಪರಿಗಣಿಸಿ ಕೇಂದ್ರ ಸರ್ಕಾರವು ತನಿಖೆಯನ್ನು ಸಿಬಿಐಗೆ ಒಪ್ಪಿಸಿದೆ. ಬಿಹಾರ ಮತ್ತು ಗುಜರಾತ್ ಸೇರಿದಂತೆ ದೇಶದ ಹಲವು ಭಾಗಗಳಲ್ಲಿ ಪ್ರಶ್ನೆಪತ್ರಿಕೆ ಸೋರಿಕೆಯ ಜಾಲವು ಹರಡಿಕೊಂಡಿರುವುದು ಪ್ರಾಥಮಿಕ ತನಿಖೆಯಿಂದ ತಿಳಿದುಬಂದಿದೆ. ಲಕ್ಷಾಂತರ ರೂಪಾಯಿಗಳಿಗೆ ಪ್ರಶ್ನೆಪತ್ರಿಕೆಯನ್ನು ಮಾರಾಟ ಮಾಡಿರುವ ಆರೋಪ ಕೇಳಿಬಂದಿದ್ದು, ಇದರ ಹಿಂದೆ ದೊಡ್ಡ ಮಾಫಿಯಾ ಕೈವಾಡವಿರುವ ಶಂಕೆ ವ್ಯಕ್ತವಾಗಿದೆ. ಶಿಕ್ಷಣ ಸಚಿವಾಲಯವು ಶೀಘ್ರದಲ್ಲೇ ಮರುಪರೀಕ್ಷೆಯ ದಿನಾಂಕವನ್ನು ಘೋಷಿಸಿದರೂ, ವಿದ್ಯಾರ್ಥಿಗಳಲ್ಲಿ ಮೂಡಿರುವ ಆತಂಕ ಮಾತ್ರ ಕಡಿಮೆಯಾಗಿಲ್ಲ. ಈ ಪರೀಕ್ಷಾ ರದ್ದತಿಯಿಂದ ವಿದ್ಯಾರ್ಥಿಗಳು ಎದುರಿಸುತ್ತಿರುವ ತೊಂದರೆಗಳು ಅಪಾರ. ವೈದ್ಯರಾಗಬೇಕೆಂಬ ಕನಸು ಹೊತ್ತು ಹಗಲಿರುಳು ಅಭ್ಯಾಸ ಮಾಡಿದ್ದ ವಿದ್ಯಾರ್ಥಿಗಳಿಗೆ ಈ ಸುದ್ದಿ ಮಾನಸಿಕವಾಗಿ ದೊಡ್ಡ ಆಘಾತ ನೀಡಿದೆ. ಪರೀಕ್ಷೆಯ ಒತ್ತಡದಿಂದ ಹೊರಬರಲು ಸಜ್ಜಾಗುತ್ತಿದ್ದ ಸಮಯದಲ್ಲಿ ಮತ್ತೆ ಪರೀಕ್ಷೆ ಎದುರಿಸಬೇಕಾದ ಅನಿವಾರ್ಯತೆ ಅವರಲ್ಲಿ ಏಕಾಗ್ರತೆಯ ಕೊರತೆ ಮತ್ತು ಖಿನ್ನತೆಯನ್ನುಂಟುಮಾಡುತ್ತಿದೆ. ಬಡ ಮತ್ತು ಮಧ್ಯಮ ವರ್ಗದ ಪೋಷಕರು ತಮ್ಮ ಮಕ್ಕಳ ಕೋಚಿಂಗ್ ಮತ್ತು ಪರೀಕ್ಷಾ ತಯಾರಿಗಾಗಿ ಲಕ್ಷಾಂತರ ರೂಪಾಯಿ ವೆಚ್ಚ ಮಾಡಿದ್ದಾರೆ. ಈಗ ಮರುಪರೀಕ್ಷೆಯ ನೆಪದಲ್ಲಿ ಮತ್ತೆ ಪ್ರಯಾಣ ಮತ್ತು ವಾಸ್ತವ್ಯದ ವೆಚ್ಚ ಭರಿಸುವುದು ಅವರಿಗೆ ಆರ್ಥಿಕವಾಗಿ ಭಾರಿ ಹೊರೆಯಾಗಲಿದೆ. ಇದಲ್ಲದೆ, ಪರೀಕ್ಷಾ ಪ್ರಕ್ರಿಯೆ ವಿಳಂಬವಾಗುವುದರಿಂದ ಶೈಕ್ಷಣಿಕ ವರ್ಷದ ವೇಳಾಪಟ್ಟಿಯೂ ಏರುಪೇರಾಗಲಿದೆ. ಕೌನ್ಸೆಲಿಂಗ್ ಮತ್ತು ಪ್ರವೇಶಾತಿ ಪ್ರಕ್ರಿಯೆಗಳು ತಡವಾಗುವುದರಿಂದ ವಿದ್ಯಾರ್ಥಿಗಳ ಒಂದು ಅಮೂಲ್ಯ ವರ್ಷ ವ್ಯರ್ಥವಾಗುವ ಭೀತಿ ಎದುರಾಗಿದೆ. ವ್ಯವಸ್ಥೆಯ ತಪ್ಪುಗಳಿಗೆ ಅಮಾಯಕ ವಿದ್ಯಾರ್ಥಿಗಳು ಶಿಕ್ಷೆ ಅನುಭವಿಸುವಂತಾಗಿರುವುದು ದುರದೃಷ್ಟಕರ. ಸರ್ಕಾರವು ಇಂತಹ ಹಗರಣಗಳು ಮರುಕಳಿಸದಂತೆ ಕಟ್ಟುನಿಟ್ಟಿನ ಕಾನೂನು ಜಾರಿಗೆ ತರಬೇಕಿದೆ. ಮರು ಪರೀಕ್ಷೆಯು ಯಾವುದೇ ಲೋಪವಿಲ್ಲದೆ, ಪಾರದರ್ಶಕವಾಗಿ ನಡೆಯುವುದೇ ಈಗಿರುವ ದೊಡ್ಡ ಸವಾಲಾಗಿದೆ.ಚಿ

# ಆರ್ಥಿಕ ಶಿಸ್ತಿಗೆ ಪ್ರಧಾನಿ ಮಂತ್ರ..?

**ಒಂದನೇ ಪುಟದಿಂದ......**

ಮತ್ತು ಅನಗತ್ಯ ಡಾಲರ್ ವೆಚ್ಚ ಹಾಗೂ ಚಿನ್ನದ ಖರೀದಿಯನ್ನು ಮುಂದೂಡಬೇಕು ಎಂಬುದು ಪ್ರಧಾನಿಯವರ ಕರೆಯ ಸಾರಾಂಶವಾಗಿದೆ. ಈ ಆರ್ಥಿಕ ತುರ್ತು ಪರಿಸ್ಥಿತಿಯ ಸಂದರ್ಭದಲ್ಲಿ ಪ್ರಧಾನಿಯವರ ಈ ನಡೆಯನ್ನು ಸಕಾರಾತ್ಮಕ ಮತ್ತು ನಕಾರಾತ್ಮಕ ಎಂಬ ಎರಡೂ ಆಯಾಮಗಳಲ್ಲಿ ವಿಶ್ಲೇಷಿಸಬಹುದಾಗಿದೆ. ಪ್ರಧಾನಿಯವರ ಈ ಕರೆ ದೇಶದ ಆರ್ಥಿಕತೆಯನ್ನು ಉಳಿಸಲು ಅತ್ಯಗತ್ಯವಾದ ಹೆಜ್ಜೆಯಾಗಿದೆ. ಭಾರತೀಯರು ವಿದೇಶ ಪ್ರವಾಸ ಮತ್ತು ಐಷಾರಾಮಿ ಆಮದುಗಳಿಗಾಗಿ ಪ್ರತಿ ವರ್ಷ ಶತಕೋಟಿ ಡಾಲರ್‌ಗಳನ್ನು ಖರ್ಚು ಮಾಡುತ್ತಾರೆ. ಇದನ್ನು ನಿಯಂತ್ರಿಸುವುದರಿಂದ ವಿದೇಶಿ ವಿನಿಮಯ ಮೀಸಲು ಹೆಚ್ಚಾಗಿ, ಜಾಗತಿಕ ಮಟ್ಟದಲ್ಲಿ ರೂಪಾಯಿಯ ಸ್ಥಿರತೆಯನ್ನು ಕಾಪಾಡಲು ಸಾಧ್ಯವಾಗುತ್ತದೆ. ಅಲ್ಲದೆ, ಇದರಿಂದ 'ದೇಖೋ ಅಪ್ನಾ ದೇಶ್' ಅಭಿಯಾನಕ್ಕೆ ಬಲ ಸಿಗಲಿದ್ದು, ದೇಶದ ಒಳಗಿನ ಪ್ರವಾಸೋದ್ಯಮ ಕ್ಷೇತ್ರ ಮತ್ತು ಸ್ಥಳೀಯ ಉದ್ಯೋಗವಕಾಶಗಳು ವೃದ್ಧಿಯಾಗಲಿವೆ. ಜನರು ಚಿನ್ನದ ಮೇಲಿನ ಹೂಡಿಕೆಯನ್ನು ಕಡಿಮೆ ಮಾಡುವುದರಿಂದ ದೇಶದ ಚಾಲ್ತಿ ಖಾತೆ ಕೊರತೆ ತಗ್ಗಲು ಸಹಕಾರಿಯಾಗಲಿದೆ. ಇದು ಸಂಕಷ್ಟದ ಸಮಯದಲ್ಲಿ ದೇಶಪ್ರೇಮದೊಂದಿಗೆ ಆರ್ಥಿಕ ಶಿಸ್ತನ್ನು ಮೈಗೂಡಿಸಿಕೊಳ್ಳಲು ಪ್ರೇರಣೆ ನೀಡುತ್ತದೆ. ಆದರೆ, ಈ ಮನವಿಯ ನಕಾರಾತ್ಮಕ ಆಯಾಮಗಳನ್ನು ಗಮನಿಸಿದಾಗ ಕೆಲವು ಸವಾಲುಗಳು ಕಂಡುಬರುತ್ತವೆ. ಈಗಾಗಲೇ ವಿದೇಶಿ ಪ್ರವಾಸಕ್ಕೆ ಯೋಜಿಸಿ ಟಿಕೆಟ್ ಮತ್ತು ಹೋಟೆಲ್ ಬುಕಿಂಗ್ ಮಾಡಿರುವ ಮಧ್ಯಮ ಮತ್ತು ಶ್ರೀಮಂತ ವರ್ಗದ ಜನರಿಗೆ ಇದು ಆರ್ಥಿಕ ನಷ್ಟ ಉಂಟುಮಾಡಬಹುದು. ಅಲ್ಲದೆ, ಪ್ರವಾಸೋದ್ಯಮ ಮತ್ತು ವಿಮಾನಯಾನ ಸಂಸ್ಥೆಗಳಿಗೆ ಅಂತರಾಷ್ಟ್ರೀಯ ಬುಕಿಂಗ್‌ಗಳು ರದ್ದಾಗುವುದರಿಂದ ವ್ಯವಹಾರದಲ್ಲಿ ಭಾರಿ ಹಿನ್ನಡೆಯಾಗುವ ಸಾಧ್ಯತೆಯಿದೆ. ಭಾರತದಂತಹ ದೇಶದಲ್ಲಿ ಚಿನ್ನದ ಮೇಲೆ ಜನರಿಗಿರುವ ಸಾಂಪ್ರದಾಯಿಕ ನಂಬಿಕೆ ಮತ್ತು ಹೂಡಿಕೆಯ ಆಸಕ್ತಿಯನ್ನು ತಡೆಯುವುದು ಕಷ್ಟದ ಕೆಲಸ. ಕೇವಲ ಪ್ರವಾಸ ತಡೆಯುವುದರಿಂದ ರೂಪಾಯಿ ಮೌಲ್ಯ ಏರುತ್ತದೆ ಎಂಬುದು ಅಲ್ಪಾವಧಿಯ ಪರಿಹಾರವಾಗಬಹುದೇ ಹೊರತು, ಕಚ್ಚಾ ತೈಲ ಬೆಲೆ ಏರಿಕೆಯಂತಹ ಜಾಗತಿಕ ಸಮಸ್ಯೆಗಳಿಗೆ ಇದು ಪೂರ್ಣ ಉತ್ತರವಲ್ಲ ಎಂಬ ವಾದವೂ ಇದೆ.

# ಪ್ರಧಾನಿ ಕರೆಗೆ ದೊಡ್ಡಗೌಡರ ಸಾಥ್

**ಒಂದನೇ ಪುಟದಿಂದ......**

ನಮ್ಮ ದೇಶದ ಹಣ ನಮ್ಮಲ್ಲೇ ಉಳಿಯುವುದು ಇಂದಿನ ತುರ್ತು ಅಗತ್ಯ," ಎಂದು ಅಭಿಪ್ರಾಯಪಟ್ಟರು. ನಾನು ಕೂಡ ಪ್ರಧಾನಿಯಾಗಿ ಕೆಲಸ ಮಾಡಿದವನು, ದೇಶದ ಆರ್ಥಿಕ ಪರಿಸ್ಥಿತಿ ಹದಗೆಟ್ಟಾಗ ಜನರಿಂದ ಇಂತಹ ತ್ಯಾಗ ಮತ್ತು ಸಹಕಾರವನ್ನು ನಿರೀಕ್ಷಿಸುವುದು ತಪ್ಪಲ್ಲ. ಸ್ವದೇಶಿ ವಸ್ತುಗಳ ಬಳಕೆಗೆ ಒತ್ತು ನೀಡುವ ಮೂಲಕ ನಾವು ನಮ್ಮ ಆರ್ಥಿಕತೆಯನ್ನು ಬಲಪಡಿಸಬೇಕಿದೆ," ಎಂದು ತಿಳಿಸಿದರು. ಚಿನ್ನದ ಮೇಲಿನ ವ್ಯಾಮೋಹ ಕಡಿಮೆ ಮಾಡುವಂತೆ ಪ್ರಧಾನಿ ಹೇಳಿರುವುದನ್ನು ಉಲ್ಲೇಖಿಸಿದ ಗೌಡರು, ಇದು ಕಷ್ಟದ ಕೆಲಸವಾದರೂ ದೇಶದ ಹಿತಕ್ಕಾಗಿ ಜನರು ಸಹಕರಿಸಬೇಕು ಎಂದು ಮನವಿ ಮಾಡಿದರು. ಈ ಹೇಳಿಕೆಯು ರಾಜ ಕೀಯ ವಲಯದಲ್ಲಿ ಭಾರಿ ಮಹತ್ವ ಪಡೆದುಕೊಂಡಿದ್ದು, ವಿರೋಧ ಪಕ್ಷಗಳ ಪ್ರಮುಖ ನಾಯಕರೊಬ್ಬರು ಪ್ರಧಾನಿಯವರ ನಿಲುವನ್ನು ಬೆಂಬಲಿಸಿರುವುದು ಸರ್ಕಾರದ ಕೈ ಬಲಪಡಿಸಿದಂತಾಗಿದೆ.

# ರಾಜ್ಯ ಸರ್ಕಾರಿ ನೌಕರರ ಮಕ್ಕಳ ಪ್ರತಿಭಾ ಪುರಸ್ಕಾರಕ್ಕೆ ಅರ್ಜಿ ಅಹ್ವಾನ

ಮಂಗಳೂರು–2026ನೇ ಸಾಲಿನ ಎಸ್.ಎಸ್.ಎಲ್.ಸಿ ಮತ್ತು ಪಿ.ಯು.ಸಿ ಪರೀಕ್ಷೆಗಳಲ್ಲಿ ಶೇ.90%ಕ್ಕಿಂತ ಹೆಚ್ಚಿನ ಅಂಕ ಪಡೆದ ರಾಜ್ಯ ಸರ್ಕಾರಿ ನೌಕರರ ಮಕ್ಕಳಿಗೆ ಪ್ರತಿಭಾ ಪುರ ಸ್ಕಾರಕ್ಕೆ ಆನ್‌ಲೈನ್ ಮೂಲಕ ಅರ್ಜಿಯನ್ನು ಆಹ್ವಾನಿಸಲಾಗಿದೆ. ಲಿಂಕ್ https://powerm edia.Info ಮುಖಾಂತರ ಅರ್ಜಿಯನ್ನು ಅಪ್‌ಲೋಡ್ ಮಾಡಬೇಕಾಗಿರುತ್ತದೆ. ಆನ್‌ಲೈನ್ ಅರ್ಜಿ ಸಲ್ಲಿಸಲು ವಿಧಾನಹಾಗೂ ಅಗತ್ಯ ಮಾಹಿತಿಗೆ ಕೆ.ಎಸ್.ಜಿ.ಇ.ಎ ನ್ಯೂಸ್ ಯೂಟ್ಯೂಬ್ ಚಾನಲ್ ಭೇಟಿ ನೀಡಬಹುದು.

# ಅಂಗನವಾಡಿಯ ಹುದ್ದೆ : ಅರ್ಜಿ ಆಹ್ವಾನ

ಮಂಗಳೂರು – ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ ಮಂಗಳೂರು (ನಗರ) ವ್ಯಾಪ್ತಿಯ ಮಂಗಳೂರು ತೋಟ ಗ್ರಾಮದ ಅಂಗನವಾಡಿ ಕಾರ್ಯಕರ್ತೆ ಹುದ್ದೆಗೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು ಮೇ 30 ಕೊನೆಯ ದಿನ. ಅರ್ಜಿ ನಮೂನೆ ಹಾಗೂ ಹೆಚ್ಚಿನ ಮಾಹಿತಿಗೆ ಶಿಶು ಅಭಿವೃದ್ಧಿ ಯೋಜನಾಧಿಕಾರಿಗಳ ಕಛೇರಿ, ಸಿಲ್ವಾ ಕ್ರಾಸ್ ರೋಡ್ ವೆಲೆನ್ಸಿಯಾ, ಬಿಷಪ್ ವಿಕ್ಟರ್ ಅಡ್ಡರಸ್ತೆ, ಮಂಗಳೂರು ಇಲ್ಲಿಗೆ ಸಂಪರ್ಕಿಸಬಹುದು ಎಂದು ಮಂಗಳೂರು (ನಗರ) ಶಿಶು ಅಭಿವೃದ್ಧಿ ಯೋಜನಾಧಿಕಾರಿ ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಅಂಬೇಡ್ಕರ್ ಭವನ : ನಾಮನಿರ್ದೇಶನಕ್ಕೆ ಅರ್ಜಿ ಆಹ್ವಾನ

ಶಿವಮೊಗ್ಗ ; ಭದ್ರಾವತಿ ತಾಲೂಕು ಕೇಂದ್ರದಲ್ಲಿರುವ ಡಾ॥ ಬಿ.ಆರ. ಅಂಬೇಡ್ಕರ್ ಸಮುದಾಯ ಭವನದ ನಿರ್ವಹಣೆ ಮಾಡಲು 2 ವರ್ಷಗಳ ಅವಧಿಗೆ ನಿರ್ವಹಣಾ ಸಮಿತಿಯನ್ನು ರಚಿಸಬೇಕಾಗಿದ್ದು, ಪರಿಶಿಷ್ಟ ಜಾತಿಗೆ ಸೇರಿದ 3 ಸದಸ್ಯರನ್ನು ನಾಮ ನಿರ್ದೇಶನ ಮಾಡುವ ಸಲುವಾಗಿ ಅರ್ಜಿ ಆಹ್ವಾನಿಸಿದೆ. ಹೆಚ್ಚಿನ ಮಾಹಿತಿಗಾಗಿ ಕಚೇರಿಯನ್ನು ಖುದ್ದಾಗಿ ಅಥವಾ ದೂ.ಸಂ.: 08282–263761 ನ್ನು ಸಂಪರ್ಕಿಸುವುದು.

# ಸಾವಯವ ಗೊಬ್ಬರ ತಯಾರಿಕಾ ತರಬೇತಿ ಶಿಬಿರ

ಶಿವಮೊಗ್ಗ : ಬೆಂಗಳೂರು ಗ್ರಾಮಾಂತರ ಜಿಲ್ಲೆ ಹೊಸಕೋಟೆ ತಾಲ್ಲೂಕು ಸೊಣ್ಣಹಳ್ಳಿಪುರದಲ್ಲಿರುವ ಕೆನರಾ ಬ್ಯಾಂಕ್ ಗ್ರಾಮೀಣ ಸ್ವ ಉದ್ಯೋಗ ತರಬೇತಿ ಸಂಸ್ಥೆಯಲ್ಲಿ ಮೇ 18 ರಿಂದ 13 ದಿನಗಳ ಕಾಲ ನಿರುದ್ಯೋಗಿ ಪುರುಷರು ಹಾಗೂ ಮಹಿಳೆಯರಿಗೆ ಕುರಿ ಸಾಕಾಣಿಕೆ ಸಾವಯವ ಗೊಬ್ಬರ ತಯಾರಿಕೆ ಬಗ್ಗೆ ತರಬೇತಿ ನೀಡಲಾಗುತ್ತಿದ್ದು, ಆಸಕ್ತರಿಂದ ಅರ್ಜಿ ಆಹ್ವಾನಿಸಿದೆ. ದೂರವಾಣಿ ಸಂಖ್ಯೆ 8970476050/ 9591514154/ 9686248369/6363139123/ 9505894247 ಗಳಿಗೆ ಸಂಪರ್ಕಿಸಿ ತಮ್ಮ ಹೆಸರನ್ನು ನೋಂದಾಯಿಸಿಕೊಳ್ಳಬಹುದೆಂದು ಸಂಸ್ಥೆಯ ನಿರ್ದೇಶಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ತರಬೇತಿಗೆ ಅರ್ಜಿ ಆಹ್ವಾನ

ಮಡಿಕೇರಿ : ಕರ್ನಾಟಕ ಇನ್‌ಸ್ಟಿಟ್ಯೂಟ್ ಆಫ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ಮಡಿಕೇರಿ ಸಹಕಾರ ತರಬೇತಿ ಸಂಸ್ಥೆಯ ವತಿಯಿಂದ 2026ರ ಜುಲೈ, 01ರಿಂದ 6 ತಿಂಗಳ ಅವಧಿಯ ರೆಗ್ಯೂಲರ್ ಡಿಪ್ಲೊಮಾ ಇನ್ ಕೋ–ಆಪರೇಟಿವ್ ಮ್ಯಾನೇಜ್‌ಮೆಂಟ್ ಕೋರ್ಸ್ ಸಹಕಾರ ತರಬೇತಿಯನ್ನು ಪ್ರಾರಂಭಿಸ ಲಾಗುತ್ತಿದ್ದು, ಕೊಡಗು, ಹಾಸನ ಹಾಗೂ ಮೈಸೂರು ಜಿಲ್ಲೆಯ ಪಿರಿಯಾಪಟ್ಟಣ ತಾಲ್ಲೂಕು, ಚಿಕ್ಕಮಗಳೂರು ಜಿಲ್ಲೆಯ ಮೂಡಿಗೆರೆ ತಾಲ್ಲೂಕುಗಳು ನಮ್ಮ ತರಬೇತಿ ಸಂಸ್ಥೆಯ ವ್ಯಾಪ್ತಿಯಲ್ಲಿ ಬರುವುದರಿಂದ ಅರ್ಜಿ ಆಹ್ವಾನಿಸಲಾಗಿದೆ. ಹೆಚ್ಚಿನ ಮಾಹಿತಿಗೆ ದೂ.ಸಂ.: 9663153922, 8762925862, 8762110952ನ್ನು ಸಂಪರ್ಕಿಸಬಹುದು.

# ಬಂಟರ ಸಂಘದ ಪದಾಧಿಕಾರಿಗಳ ಅವಿರೋಧ ಆಯ್ಕೆ




ಮಂಗಳೂರು: ಬಂಟರ ಯಾನೆ ನಾಡವರ ಮಾತೃ ಸಂಘದ 2026–29ನೇ ಸಾಲಿನ ನೂತನ ಪದಾಧಿಕಾರಿಗಳ ಆಯ್ಕೆ ಪ್ರಕ್ರಿಯೆ ಪೂರ್ಣಗೊಂಡಿದ್ದು, ಅಧ್ಯಕ್ಷರಾಗಿ ಮಾಲಾಡಿ ಅಜಿತ್ ಕುಮಾರ್ ರೈ ಕೊಡಿಯಾಲ್ ಗುತ್ತು ಅವರು ಅವಿರೋಧವಾಗಿ ಮರು ಆಯ್ಕೆಯಾಗಿದ್ದಾರೆ. ಸಂಘದ ಪ್ರಮುಖ ಪದಾಧಿಕಾರಿಗಳಾಗಿ ಕಾವು ಹೇಮನಾಥ ಶೆಟ್ಟಿ (ಉಪಾಧ್ಯಕ್ಷರು), ಎಮ್. ಕರುಣಾಕರ ಶೆಟ್ಟಿ (ಪ್ರಧಾನ ಕಾರ್ಯದರ್ಶಿ), ಸಿಎ ರಾಮ್ ಮೋಹನ್ ರೈ (ಕೋಶಾಧಿಕಾರಿ) ಹಾಗೂ ಪುಂಚಮೆ ಪದ್ಮನಾಭ ಶೆಟ್ಟಿ (ಜೊತೆ ಕಾರ್ಯದರ್ಶಿ) ಅವರು ಅವಿರೋಧವಾಗಿ ಆಯ್ಕೆಯಾಗಿದ್ದಾರೆ ಎಂದು ಘೋಷಿಸಲಾಗಿದೆ. ಅಧ್ಯಕ್ಷರು ಸೇರಿದಂತೆ ಒಟ್ಟು 83 ಸದಸ್ಯರನ್ನೊಳ ಗೊಂಡ ಬೃಹತ್ ಕಾರ್ಯಕಾರಿ ಸಮಿತಿಯನ್ನು ಚುನಾವಣಾ ಆಯೋಗವು ಅಧಿಕೃತವಾಗಿ ಪ್ರಕಟಿಸಿದೆ.

# 2ನೇ ಮಂಗಳೂರು ಓಪನ್ ಶೂಟಿಂಗ್ ಚಾಂಪಿಯನ್‌ಶಿಪ್




ಮಂಗಳೂರು: ಮಂಗಳೂರು ರೈಫಲ್ ಕ್ಲಬ್ ವತಿಯಿಂದ '2ನೇ ಮಂಗಳೂರು ಓಪನ್ ಶೂಟಿಂಗ್ ಚಾಂಪಿಯನ್‌ಶಿಪ್ 2026' ಅನ್ನು ನಗರದಲ್ಲಿ ಆಯೋಜಿಸಲಾಗಿದೆ ಎಂದು ಕ್ಲಬ್‌ನ ಸಂಸ್ಥಾಪಕ ಕಾರ್ಯದರ್ಶಿ ಮುಕೇಶ್ ಕುಮಾರ್ ತಿಳಿಸಿದರು. ಅವರು ನಗರದ ಪತ್ರಿಕಾ ಭವನದಲ್ಲಿ ನಡೆದ ಪತ್ರಿಕಾಗೋಷ್ಠಿಯಲ್ಲಿ ಈ ಬಗ್ಗೆ ಮಾಹಿತಿ ನೀಡಿ, ಈ ಪ್ರತಿಷ್ಠಿತ ಕ್ರೀಡಾಕೂಟವು ಮೇ 26 ರಿಂದ ಮೇ 30 ರವರೆಗೆ ನಡೆಯಲಿದ್ದು, ವಿವಿಧ ರಾಜ್ಯಗಳ ಸುಮಾರು 450ಕ್ಕೂ ಹೆಚ್ಚು ಶೂಟರ್‌ಗಳು ಭಾಗವಹಿಸುವ ನಿರೀಕ್ಷೆಯಿದೆ. ಅರ್ಹತಾ ಸುತ್ತಿನ ಪಂದ್ಯಗಳು ಕದ್ರಿ ಮಲ್ಲಿಕಟ್ಟೆಯ ಜುಗುಲ್ ಟವರ್ಸ್‌ನಲ್ಲಿರುವ ಮಂಗಳೂರು ರೈಫಲ್ ಕ್ಲಬ್‌ನಲ್ಲಿ ನಡೆಯಲಿದ್ದರೆ, ಅಂತಿಮ ಹಂತದ ಪಂದ್ಯಗಳು ನಗರದ ಯು.ಎಸ್. ಮಲ್ಯ ಒಳಾಂಗಣ ಕ್ರೀಡಾಂಗಣದಲ್ಲಿ ನಡೆಯಲಿವೆ ಎಂದರು.

# ಸಚಿವ ಎನ್. ಎಸ್. ಭೋಸರಾಜು ಧರ್ಮಸ್ಥಳ ಭೇಟಿ



ಉಜಿರೆ : ರಾಜ್ಯದ ಸಣ್ಣ ನೀರಾವರಿ ಹಾಗೂ ವಿಜ್ಞಾನ ಮತ್ತು ತಂತ್ರಜ್ಞಾನ ಸಚಿವರಾದ ಎನ್.ಎಸ್. ಭೋಸರಾಜು ಅವರು ಮಂಗಳವಾರ ಪ್ರಸಿದ್ಧ ಪುಣ್ಯಕ್ಷೇತ್ರ ಧರ್ಮಸ್ಥಳಕ್ಕೆ ಭೇಟಿ ನೀಡಿದರು. ಕ್ಷೇತ್ರದ ಧರ್ಮಾಧಿಕಾರಿಗಳಾದ ಡಾ. ಡಿ. ವೀರೇಂದ್ರ ಹೆಗ್ಗಡೆಯವರನ್ನು ಭೇಟಿಯಾದ ಸಚಿವರು, ಅವರ ಆಶೀರ್ವಾದ ಪಡೆದು ಸುದೀರ್ಘ ಕಾಲ ಸೌಹಾರ್ದಯುತ ಮಾತುಕತೆ ನಡೆಸಿದರು. ಈ ಸಂದರ್ಭದಲ್ಲಿ ಸಚಿವ ಭೋಸರಾಜು ಅವರನ್ನು ಗೌರವಿಸಿದ ಡಾ. ವೀರೇಂದ್ರ ಹೆಗ್ಗಡೆಯವರು ಕ್ಷೇತ್ರದ ವತಿಯಿಂದ ಸನ್ಮಾನಿಸಿದರು. ಧರ್ಮಾಧಿಕಾರಿಗಳ ಭೇಟಿಯ ನಂತರ ಶ್ರೀ ಮಂಜುನಾಥ ಸ್ವಾಮಿಯ ದರ್ಶನ ಪಡೆದ ಸಚಿವರು, ವಿಶೇಷ ಪೂಜೆ ಸಲ್ಲಿಸಿ ರಾಜ್ಯದ ಹಿತಕ್ಕಾಗಿ ಪ್ರಾರ್ಥಿಸಿದರು.

# ಎಂ.ಸಿ.ಸಿ. ಬ್ಯಾಂಕಿನ 114ನೇ ಸಂಸ್ಥಾಪಕರ ದಿನಾಚರಣೆ



ಮಂಗಳೂರು: ಎಂಸಿಸಿ ಬ್ಯಾಂಕ್ ಲಿಮಿಟೆಡ್ ತನ್ನ 114ನೇ ಸಂಸ್ಥಾಪಕರ ದಿನಾಚರಣೆಯನ್ನು ಆಡಳಿತ ಕಚೇರಿ ಆವರಣದಲ್ಲಿ ಭವ್ಯವಾಗಿ ಆಚರಿಸಿತು. ಕಾರ್ಯಕ್ರಮದಲ್ಲಿ ಬ್ಯಾಂಕಿನ ಸಂಸ್ಥಾಪಕರಾದ ದಿವಂಗತ ಶ್ರೀ ಪಿ.ಎಫ್.ಎಕ್ಸ್. ಸಾಲ್ಡಾನ್ಹಾ ಅವರ ದೂರ ದೃಷ್ಟಿಯ ಸೇವೆಯನ್ನು ಸ್ಮರಿಸಲಾಯಿತು ಹಾಗೂ ಬ್ಯಾಂಕ್ ಸಾಧಿಸಿರುವ ನಿರಂತರ ಪ್ರಗತಿಯನ್ನು ಗೌರವಿಸಲಾಯಿತು. ಸಹಕಾರ ರತ್ನ ಶ್ರೀ ಅನಿಲ್ ಲೋಬೋ ಕಾರ್ಯಕ್ರಮದ ಅಧ್ಯಕ್ಷತೆ ವಹಿಸಿದ್ದರು. ಮುಖ್ಯ ಅತಿಥಿಗಳಾಗಿ ರೇವ್. ಡಾ. ಪ್ರವೀಣ್ ಮಾರ್ಟಿಸ್ ಎಸ್.ಜೆ, ಡಾ.ಮೀರಾ ಅರನ್ಹಾ, ಶ್ರೀ ರಾಯ್ ಕ್ಯಾಸ್ಟೆಲಿನೋ ಮತ್ತು ಶ್ರೀ ಐಸಾಕ್ ವಾಸ್ ಭಾಗವಹಿಸಿದ್ದರು. ಬ್ಯಾಂಕಿನ ಪ್ರಗತಿಯ ಬಗ್ಗೆ ವಿವರಿಸಿದ ಅಧ್ಯಕ್ಷರು, 2018ರ ನಂತರ ಬ್ಯಾಂಕ್ ಬೆಳವಣಿಗೆ ಸಾಧಿಸಿದೆ ಎಂದು ತಿಳಿಸಿದರು.

# ಅಭಿವೃದ್ಧಿಗೆ ಕಾಮಗಾರಿಗೆ ಶಾಸಕ ಕಾಮತ್ ಭೂಮಿ ಪೂಜೆ



ಮಂಗಳೂರು: ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರದ (ಮೂಡ) ವತಿಯಿಂದ ಮಹಾನಗರ ಪಾಲಿಕೆ ವ್ಯಾಪ್ತಿಯ 49ನೇ ಕಂಕನಾಡಿ ವಾರ್ಡಿನ ಸದಾಶಿವನಗರ ಪಾರ್ಕ್ ಅಭಿವೃದ್ಧಿ ಕಾಮಗಾರಿಗೆ ಶಾಸಕ ವೇದವ್ಯಾಸ ಕಾಮತ್ ಅವರು ಶಂಕುಸ್ಥಾಪನೆ ನೆರವೇರಿಸಿದರು. ಸುಮಾರು 10.65 ಲಕ್ಷ ರೂ. ಅನುದಾನದಲ್ಲಿ ಈ ಅಭಿವೃದ್ಧಿ ಕಾರ್ಯಗಳು ನಡೆಯಲಿವೆ. ಭೂಮಿ ಪೂಜೆ ನೆರವೇರಿಸಿ ಮಾತನಾಡಿದ ಶಾಸಕ ವೇದವ್ಯಾಸ ಕಾಮತ್ ಅವರು, "ಈ ಹಿಂದೆ ಮೂಡ ವತಿಯಿಂದಲೇ ಈ ಪಾರ್ಕ್ ಅಭಿವೃದ್ಧಿಗೊಂಡಿದ್ದು, ಸಾರ್ವಜನಿಕರು ಇದರ ಸದುಪಯೋಗ ಪಡೆದುಕೊಳ್ಳುತ್ತಿದ್ದಾರೆ. ಪಾರ್ಕ್ ಅನ್ನು ಇನ್ನಷ್ಟು ಆಧುನೀಕರಣಗೊಳಿಸುವಂತೆ ಸಾರ್ವಜನಿಕರು ನೀಡಿದ ಮನವಿಗೆ ಸ್ಪಂದಿಸಿ, ಮೂಡ ಸಭೆಯಲ್ಲಿ ಎಲ್ಲರ ಸಹಕಾರದೊಂದಿಗೆ ಅನುಮೋದನೆ ಪಡೆದುಕೊಳ್ಳಲಾಗಿದೆ.

# ಸ್ಟಾಲಿನ್ ಹೇಳಿಕೆ : ವಿಶ್ವ ಹಿಂದೂ ಪರಿಷತ್ ತೀವ್ರ ಖಂಡನೆ



ಮಂಗಳೂರು: ತಮಿಳುನಾಡು ವಿಧಾನಸಭೆಯಲ್ಲಿ ಸನಾತನ ಧರ್ಮದ ವಿರುದ್ಧ ಅವಹೇಳನಕಾರಿ ಮತ್ತು ಪ್ರಚೋದನಾತ್ಮಕ ಹೇಳಿಕೆ ನೀಡಿರುವ ಡಿಎಂಕೆ ನಾಯಕ ಉದಯನಿಧಿ ಸ್ಟಾಲಿನ್ ಅವರ ನಡವಳಿಕೆಯನ್ನು ವಿಶ್ವ ಹಿಂದೂ ಪರಿಷತ್ ತೀವ್ರವಾಗಿ ಖಂಡಿಸಿದೆ. ಈ ಕುರಿತು ಪತ್ರಿಕಾ ಪ್ರಕಟಣೆ ನೀಡಿರುವ ವಿಶ್ವ ಹಿಂದೂ ಪರಿಷತ್ ಪ್ರಾಂತ ಸಹಕಾರ್ಯದರ್ಶಿ ಶರಣ್ ಪಂಪುವೆಲ್, "ರಾಜಕೀಯ ಲಾಭಕ್ಕಾಗಿ ಕೋಟ್ಯಂತರ ಜನರ ನಂಬಿಕೆಯಾಗಿರುವ ಸನಾತನ ಧರ್ಮದ ನಿರ್ಮೂಲನೆಯ ಬಗ್ಗೆ ಮಾತನಾಡುವುದು ಸಂವಿಧಾನ ವಿರೋಧಿ ನಡವಳಿಕೆಯಾಗಿದೆ. ಸದನದ ಗೌರವ ಕಾಪಾಡುವ ದೃಷ್ಟಿಯಿಂದ ಸನಾತನ ಧರ್ಮದ ವಿರುದ್ಧದ ಈ ವಿಷಪೂರಿತ ಮಾತುಗಳನ್ನು ವಿಧಾನಸಭೆಯ ಅಧಿಕೃತ ನಡಾವಳಿಗಳಿಂದ ತೆಗೆದುಹಾಕಬೇಕು," ಎಂದು ತಮಿಳುನಾಡು ಸರ್ಕಾರವನ್ನು ಆಗ್ರಹಿಸಿದ್ದಾರೆ.

# ಕುಂದೋಡಿ ಕೆರೆ ಅಭಿವೃದ್ಧಿಗೆ ಶಾಸಕ ಕಾಮತ್ ಶಿಲಾನ್ಯಾಸ



ಮಂಗಳೂರು: ಮಂಗಳೂರು ನಗರಾಭಿವೃದ್ಧಿ ಪ್ರಾಧಿಕಾರ (ಮೂಡಾ) ವತಿಯಿಂದ ಮಂಗಳೂರು ಮಹಾನಗರ ಪಾಲಿಕೆ ವ್ಯಾಪ್ತಿಯ 53ನೇ ಬಜಾಲ್ ವಾರ್ಡ್‌ನ ಕುಂದೋಡಿ ಕೆರೆ ಅಭಿವೃದ್ಧಿ ಕಾಮಗಾರಿಗೆ ಶಾಸಕ ಡಿ. ವೇದವ್ಯಾಸ ಕಾಮತ್ ಇತ್ತೀಚೆಗೆ ಶಿಲಾನ್ಯಾಸ ನೆರವೇರಿಸಿದರು. ಸುಮಾರು 25 ಲಕ್ಷ ರೂಪಾಯಿ ಅನುದಾನದಲ್ಲಿ ಈ ಕಾಮಗಾರಿ ನಡೆಯಲಿದೆ. ಶಿಲಾನ್ಯಾಸ ನೆರವೇರಿಸಿ ಮಾತನಾಡಿದ ಶಾಸಕರು, "ಸ್ಥಳೀಯ ನಿವಾಸಿಗಳು ವಿಶ್ರಾಂತಿಗಾಗಿ ಬಳಸುವ ಈ ಕೆರೆಯನ್ನು ಈ ಹಿಂದೆಯೇ ಒಂದು ಹಂತದಲ್ಲಿ ಅಭಿವೃದ್ಧಿಪಡಿಸಲಾಗಿತ್ತು. ಇದೀಗ ಸಾರ್ವಜನಿಕರ ಬೇಡಿಕೆಗೆ ಸ್ಪಂದಿಸಿ, ಮುಂದುವರಿದ ಅಭಿವೃದ್ಧಿ ಕಾಮಗಾರಿಯನ್ನು ಕೈಗೆತ್ತಿಕೊಳ್ಳಲಾಗಿದೆ. ಈ ಯೋಜನೆಯ ಕುರಿತು ಮೂಡಾ ಸಭೆಯಲ್ಲಿ ನಾನು ಸಲ್ಲಿಸಿದ ಮನವಿಗೆ ತಕ್ಷಣ ಸ್ಪಂದಿಸಿದ ಪ್ರಾಧಿಕಾರದ ಅಧ್ಯಕ್ಷರಾದ ಸದಾಶಿವ ಉಳ್ಳಾಲ್ ಹಾಗೂ ಸರ್ವ ಸದಸ್ಯರಿಗೂ ಅಭಿನಂದನೆ ಸಲ್ಲಿಸುತ್ತೇನೆ" ಎಂದು ತಿಳಿಸಿದರು.

# ಹೆಗ್ಗಡೆಯವರ ಆಶೀರ್ವಾದ ಪಡೆದ ಬಿ. ವೈ. ವಿಜಯೇಂದ್ರ



ಧರ್ಮಸ್ಥಳ : ಬಿ.ವೈ. ವಿಜಯೇಂದ್ರ ಅವರು ತಮ್ಮ ಸಕ್ರಿಯ ರಾಜಕೀಯ ಜವಾಬ್ದಾರಿಗಳ ನಡುವೆ ಧಾರ್ಮಿಕ ಶ್ರದ್ಧೆಯೊಂದಿಗೆ ಧರ್ಮಸ್ಥಳಕ್ಕೆ ಭೇಟಿ ನೀಡಿರುವುದು ರಾಜಕೀಯ ವಲಯದಲ್ಲಿ ಕುತೂಹಲ ಮೂಡಿಸಿದೆ. ಬಿಜೆಪಿ ರಾಜ್ಯಾಧ್ಯಕ್ಷರಾದ ಮೇಲೆ ಪಕ್ಷದ ಸಂಘಟನೆಯಲ್ಲಿ ನಿರತರಾಗಿರುವ ಅವರು ಕುಟುಂಬ ಸಮೇತರಾಗಿ ಶ್ರೀ ಕ್ಷೇತ್ರ ಧರ್ಮಸ್ಥಳಕ್ಕೆ ಆಗಮಿಸಿ ಮಂಜುನಾಥ ಸ್ವಾಮಿಯ ದರ್ಶನ ಪಡೆದರು. ದೇವಾಲಯದ ಪೂಜಾ ವಿಧಿವಿಧಾನಗಳಲ್ಲಿ ಪಾಲ್ಗೊಂಡು ವಿಶೇಷ ಸೇವೆಗಳನ್ನು ಸಲ್ಲಿಸಿದ ವಿಜಯೇಂದ್ರ ರಾಜ್ಯದ ಏಳಿಗೆಗಾಗಿ ಹಾಗೂ ಪಕ್ಷದ ಭವಿಷ್ಯದ ದೃಷ್ಟಿಯಿಂದ ಈ ಭೇಟಿ ಮಹತ್ವದ್ದೆಂದು ಭಾವಿಸಲಾಗಿದೆ. ಕ್ಷೇತ್ರದ ಧರ್ಮಾಧಿಕಾ ರಿಗಳಾದ ಡಾ.ಡಿ.ವೀರೇಂದ್ರ ಹೆಗ್ಗಡೆ ಅವರನ್ನು ಭೇಟಿ ಮಾಡಿದ ವಿಜಯೇಂದ್ರ, ಅವರೊಂದಿಗೆ ಕೆಲಕಾಲ ಸಮಾಲೋಚನೆ ನಡೆಸಿದರು.

# ಯಕ್ಷಗಾನ ಸಮ್ಮೇಳನದ ಅಧ್ಯಕ್ಷರಾಗಿ ಡಾ. ಟಿ. ಶ್ಯಾಮ ಭಟ್ ಆಯ್ಕೆ



ಮಂಗಳೂರು : ಮುಂಬಯಿ ಅಜೆಕಾರು ಕಲಾಭಿಮಾನಿ ಬಳಗವು ತನ್ನ ರಜತ ಮಹೋತ್ಸವದ ಅಂಗವಾಗಿ 2026ರ ಅಕ್ಟೋಬರ್ 3 ಮತ್ತು 4ರಂದು ಮುಂಬಯಿ ಬಂಟರ ಭವನದಲ್ಲಿ ಆಯೋಜಿಸಿರುವ ಬೃಹತ್ ಯಕ್ಷಗಾನ ಸಮ್ಮೇಳನದ ಅಧ್ಯಕ್ಷರಾಗಿ ನಿವೃತ್ತ ಐಎಎಸ್ ಅಧಿಕಾರಿ ಹಾಗೂ ಕರ್ನಾಟಕ ರಾಜ್ಯ ಮಾನವ ಹಕ್ಕುಗಳ ಆಯೋಗದ ಅಧ್ಯಕ್ಷರಾದ ಡಾ. ಟಿ. ಶ್ಯಾಮ ಭಟ್ ಅವರು ಅಧಿಕೃತವಾಗಿ ಆಯ್ಕೆಯಾಗಿದ್ದಾರೆ. ಮಂಗಳೂರಿನಲ್ಲಿ ನಡೆದ ಖಾಸಗಿ ಕಾರ್ಯಕ್ರಮವೊಂದರಲ್ಲಿ ಅಜೆಕಾರು ಬಾಲಕೃಷ್ಣ ಶೆಟ್ಟಿ ನೇತೃತ್ವದ ನಿಯೋಗವು ಭಟ್ ಅವರನ್ನು ಭೇಟಿ ಮಾಡಿ ಈ ಗೌರವದ ಆಹ್ವಾನವನ್ನು ನೀಡಿತು.

# ಎಲ್.ಪಿ.ಜಿ ದರ ಪರಿಷ್ಕರಣೆಗೆ ಐವನ್ ಡಿ'ಸೋಜಾ ಆಗ್ರಹ



ಮಂಗಳೂರು : ಮಂಗಳೂರು ಮಹಾನಗರ ಆಟೋ ರಿಕ್ಷಾ ಚಾಲಕರ 30ನೇ ವಾರ್ಷಿಕೋತ್ಸವದ ಮಹಾಸಭೆಯಲ್ಲಿ ಸಂಘದ ಅಧ್ಯಕ್ಷ ಹಾಗೂ ವಿಧಾನ ಪರಿಷತ್ ಶಾಸಕ ಐವನ್ ಡಿ'ಸೋಜಾ ಅವರು ಎಲ್.ಪಿ.ಜಿ ದರ ಏರಿಕೆಯ ಕುರಿತು ಆತಂಕ ವ್ಯಕ್ತಪಡಿಸಿದ್ದಾರೆ. ನಗರದಲ್ಲಿ ದಿನವೊಂದಕ್ಕೆ ಸುಮಾರು 5ಲೀ.ಎಲ್.ಪಿ.ಜಿ ಬಳಸಿ ಬಾಡಿಗೆ ಮಾಡುವ ಸುಮಾರು 4,000 ರಿಕ್ಷಾ ಚಾಲಕರು ಇಂಧನ ದರ ಏರಿಕೆಯಿಂದಾಗಿ ಪ್ರತೀ ದಿನ 200 ರೂಪಾಯಿಗಳಷ್ಟು ನಷ್ಟ ಅನುಭವಿಸುತ್ತಿದ್ದಾರೆ ಎಂದು ಅವರು ತಿಳಿಸಿದರು. ತೈಲ ಬೆಲೆ ಏರಿಕೆಯಿಂದ ದುಡಿಯುವ ವರ್ಗಗಳಿಗೆ ತೊಂದರೆಯಾಗುತ್ತಿದ್ದು, ಕೇಂದ್ರ ಸರ್ಕಾರ ಈ ಬಗ್ಗೆ ಕೂಡಲೇ ಕ್ರಮ ಕೈಗೊಳ್ಳಬೇಕು ಮತ್ತು ಆಟೋ ರಿಕ್ಷಾ ದರ ಪರಿಷ್ಕರಣೆಯ ಅಗತ್ಯವಿದೆ ಎಂದು ಅವರು ಒತ್ತಾಯಿಸಿದರು.

# ಸುದ್ದಿ ತುಣುಕು

ಕೇಂದ್ರ ಸರ್ಕಾರ ಅಮೂಲ್ಯ ಲೋಹಗಳ ಮೇಲಿನ ಆಮದು ಸುಂಕವನ್ನು ಶೇಕಡಾ 15ಕ್ಕೆ ಹೆಚ್ಚಿಸಿದ ಬೆನ್ನಲ್ಲೇ, ದೇಶದಲ್ಲಿ ಚಿನ್ನದ ಬೆಲೆ 1.62 ಲಕ್ಷ ರೂಪಾಯಿಗೆ ಏರಿಕೆಯಾಗಿದೆ.

ಇರಾನ್ ವಿಚಾರವಾಗಿ ನಮಗೆ ಯಾವುದೇ ಸಹಾಯದ ಅಗತ್ಯವಿಲ್ಲ ಎಂದು ನಾನು ಭಾವಿಸುತ್ತೇನೆ. ನಾವು ಅದನ್ನು ಒಂದಲ್ಲ ಒಂದು ರೀತಿಯಲ್ಲಿ ಗೆಲ್ಲುತ್ತೇವೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಹೇಳಿದ್ದಾರೆ.

ಮುಖ್ಯಮಂತ್ರಿ ವಿಜಯ್ ತಮ್ಮ ವಿಶೇಷ ಕರ್ತವ್ಯ ಅಧಿಕಾರಿ (ಒಎಸ್‌ಡಿ)ಯಾಗಿ ಜ್ಯೋತಿಷಿ ರಾಧನ್ ಪಂಡಿತ್ ವೆಟ್ರಿವೇಲ್ ಅವರನ್ನು ನೇಮಿಸಿಕೊಂಡಿದ್ದಕ್ಕೆ ಮಿತ್ರಪಕ್ಷಗಳು ಮತ್ತು ವಿಪಕ್ಷಗಳಿಂದ ಟೀಕೆ ಕೇಳಿ ಬಂದ ಬೆನ್ನಲ್ಲೇ, ಅವರನ್ನು ಆ ಹುದ್ದೆಯಿಂದ ಕೈ ಬಿಡಲಾಗಿದೆ.

ನೀಟ್ ಪ್ರಶ್ನೆ ಪತ್ರಿಕೆ ಸೋರಿಕೆ ಸಂಬಂಧ ಮಹಿಳೆಯೊಬ್ಬರನ್ನು ಪುಣೆ ಪೊಲೀಸರು ಬಂಧಿಸಿ ಸಿಬಿಐಗೆ ಒಪ್ಪಿಸಿದ್ದಾರೆ.

ಗುಜರಾತ್ ಟೈಟಾನ್ಸ್ ವಿರುದ್ಧದ ಪಂದ್ಯದಲ್ಲಿ ಸನ್‌ರೈಸರ್ಸ್ ಹೈದರಾಬಾದ್ ತಂಡ 82 ರನ್‌ಗಳಿಂದ ಹೀನಾಯವಾಗಿ ಸೋಲನ್ನು ಕಂಡಿದೆ.

ಪತ್ನಿಗೆ ಜೀವನಾಂಶದ ಹಣ ನೀಡದ ಪತಿ ವಿರುದ್ಧ ಕೌಟುಂಬಿಕ ನ್ಯಾಯಾಲಯ ಹೊರಡಿಸಿದ್ದ ಅರೆಸ್ಟ್ ವಾರಂಟ್ ಅನ್ನು ಹೈಕೋರ್ಟ್ ಎತ್ತಿಹಿಡಿದಿದೆ.

ಹೈಡ್ರೋವೀಡ್ ಗಾಂಜಾ ಮಾರಾಟಕ್ಕೆ ಯತ್ನಿಸುತ್ತಿದ್ದ ಬಿಸಿಎ ವಿದ್ಯಾರ್ಥಿನಿಯನ್ನು ಬಂಧಿಸಿ, 35ಲಕ್ಷ ರೂ. ಮೌಲ್ಯದ 1.42 ಕೆ.ಜಿ. ಗಾಂಜಾ ವಶಪಡಿಸಿಕೊಳ್ಳಲಾಗಿದೆ ಎಂದು ಮಂಗಳೂರು ನಗರ ಪೊಲೀಸ್ ಕಮಿಷನರ್ ಸುಧೀರ್ ಕುಮಾರ್ ರೆಡ್ಡಿ ತಿಳಿಸಿದ್ದಾರೆ.

ನೀಟ್ ಪರೀಕ್ಷೆಯ ಪ್ರಶ್ನೆ ಪತ್ರಿಕೆ ಸೋರಿಕೆ ಹಿನ್ನೆಲೆ ಮತ್ತೊಮ್ಮೆ ಪರೀಕ್ಷೆ ಬರೆಯಬೇಕೆಂದು ವಿದ್ಯಾರ್ಥಿಗಳಿಗೆ ಹೇಳುತ್ತಿರುವುದನ್ನು ಖಂಡಿಸಿರುವ ಯೂತ್ ಕಾಂಗ್ರೆಸ್ ಕಾರ್ಯಕರ್ತರು, ಕೇಂದ್ರ ಸರ್ಕಾರದ ವಿರುದ್ಧ ಪ್ರತಿಭಟನೆ ನಡೆಸಿದರು.

ಮೊಬೈಲ್ ವಿಚಾರಕ್ಕೆ ಸ್ನೇಹಿತನಿಂದ ಹಲ್ಲೆಗೊಳಗಾದ ಯುವಕ ಸಾವನ್ನಪ್ಪಿರುವ ಘಟನೆ ಬೆಂಗಳೂರಿನಲ್ಲಿ ನಡೆದಿದೆ.

ಅವೈಜ್ಞಾನಿಕ ಪ್ರಯೋಗಗಳಿಗೆ ಬೆಂಗಳೂರನ್ನು ಬಲಿಗೊಡಬೇಡಿ ಡಿ.ಕೆ.ಶಿವಕುಮಾರ್ ಅವರೇ ಎಂದು ಸಂಸದ ತೇಜಸ್ವಿ ಸೂರ್ಯ ಎಕ್ಸ್ ಪೋಸ್ಟ್ ಮೂಲಕ ಒತ್ತಾಯಿಸಿದ್ದಾರೆ.

ದಕ್ಷಿಣ ಕನ್ನಡ ಜಿಲ್ಲೆಯಲ್ಲಿ ಮರಣ ಹೊಂದಿದ ಗೃಹಲಕ್ಷ್ಮಿ ಫಲಾನುಭವಿಗಳ ಖಾತೆಗೆ ರೂ.22 ಕೋಟಿ ಅನುದಾನ ವರ್ಗಾವಣೆಯಾಗಿದ್ದು, ಬ್ಯಾಂಕ್ ಮುಖಾಂತರ ಖಾತೆಯನ್ನು ಸ್ಥಗಿತಗೊಳಿಸಲು ಕ್ರಮವಹಿಸಬೇಕು ಎಂದು ಜಿಲ್ಲಾ ಮಟ್ಟದ ಗ್ಯಾರಂಟಿ ಯೋಜನೆಗಳ ಅನುಷ್ಠಾನ ಸಮಿತಿ ಸೂಚಿಸಿದೆ.

ರಾಜಸ್ಥಾನದ ತಾನ್ಯಾ ಸಾವನ್ ಸುಖಾ 12ನೇ ತರಗತಿಯ ಸಿಬಿಎಸ್‌ಇ ಪರೀಕ್ಷೆಯ ಕಲಾ ವಿಭಾಗದಲ್ಲಿ ಅತ್ಯಧಿಕ ಅಂಕಗಳನ್ನು ಗಳಿಸುವ ಮೂಲಕ ಅಗ್ರಸ್ಥಾನ ಪಡೆದಿದ್ದಾರೆ.

ಅಮೆರಿಕ– ಇಸ್ರೇಲ್ ಜೊತೆ ಯುದ್ಧ ಆರಂಭವಾದ ಬಳಿಕ ಇದೇ ಮೊದಲ ಬಾರಿಗೆ ಇರಾನ್ ವಿದೇಶಾಂಗ ಸಚಿವ ಬ್ರಿಕ್ಸ್ ಶೃಂಗಸಭೆಯಲ್ಲಿ ಭಾಗವಹಿಸಲು ಭಾರತಕ್ಕೆ ಆಗಮಿಸಿದ್ದಾರೆ.

ಯುಸಿಸಿ ಜಾರಿ ಮಾಡಲಾದ ಉತ್ತರಾಖಂಡದಲ್ಲಿ ಇದೇ ಮೊದಲ ಬಾರಿಗೆ ಮುಸ್ಲಿಂ ಮಹಿಳೆಯರಲ್ಲಿ ಮರು ಮದುವೆಗೆ ಸಂಬಂಧಿಸಿದಂತೆ (ನಿಖಾ ಹಲಾಲಾ) ಪ್ರಕರಣ ದಾಖಲಾಗಿದ್ದು, ಕೋರ್ಟ್ ಕಟಕಟೆ ಹತ್ತಿದೆ.

25 ವರ್ಷಗಳಿಂದ ಭಾರತದಲ್ಲಿ ವಾಸಿಸುತ್ತಿರುವ ಮಹಿಳೆಯೊಬ್ಬರು ಪೌರತ್ವಕ್ಕಾಗಿ ಕೋರ್ಟ್ ಮೊರೆ ಹೋಗಿದ್ದಾರೆ. ಅರ್ಜಿಯನ್ನು ಕೈಗೆತ್ತಿಕೊಂಡ ನ್ಯಾಯಪೀಠ, ಸೂಕ್ತ ಕ್ರಮ ಕೈಗೊಳ್ಳುವಂತೆ ಮತ್ತು ಮುಂದಿನ ವಿಚಾರಣೆಗೆ ಮುನ್ನ ಅಫಿಡವಿಟ್ ಸಲ್ಲಿಸುವಂತೆ ಸರ್ಕಾರಿ ವಕೀಲರಿಗೆ ನಿರ್ದೇಶನ ನೀಡಿದೆ.

# ಕಾಶಿ ಹಲ್ವಾ



**ಬೇಕಾಗುವ ಪದಾರ್ಥಗಳು :**

ಬೂದುಕುಂಬಳ ಕಾಯಿ ತುರಿ – 3 ಕಪ್
ಸಕ್ಕರೆ – 1 ಕಪ್
ಕೇಸರಿ – 3 ಚಮಚ
ತುಪ್ಪ – 1 ಕಪ್
ಗೋಡಂಬಿ – 10–12
ಏಲಕ್ಕಿ ಪುಡಿ – ಚಿಟಿಕೆ

**ಮಾಡುವ ವಿಧಾನ :**

ಮೊದಲಿಗೆ ತುರಿದ ಕುಂಬಳಕಾಯಿಯನ್ನು ಕಡಾಯಿಗೆ ಹಾಕಿ ಕುಂಬಳಕಾಯಿ ಸಂಪೂರ್ಣವಾಗಿ ನೀರು ಹೀರಿಕೊಳ್ಳುವವರೆಗೆ ಬೇಯಿಸಿ ಅದಕ್ಕೆ 1 ಕಪ್ ಸಕ್ಕರೆ ಮತ್ತು ಕೇಸರಿಯನ್ನು ಹಾಕಿಕೊಂಡು, ಸಕ್ಕರೆ ಸಂಪೂರ್ಣವಾಗಿ ಕರಗುವ ತನಕ ಚೆನ್ನಾಗಿ ಮಿಶ್ರಣ ಮಾಡಿ. ಸಕ್ಕರೆ ಪಾಕವು ದಪ್ಪವಾಗುವವರೆಗೆ 5 ನಿಮಿಷ ಅಥವಾ ಅದಕ್ಕಿಂತ ಹೆಚ್ಚು ಕಾಲ ಕುದಿಸಿ. ನಂತರ, 1ಕಪ್ ತುಪ್ಪ ಸೇರಿಸಿ ಚೆನ್ನಾಗಿ ಮಿಶ್ರಣ ಮಾಡಿ. ಗೋಡಂಬಿಯನ್ನು ಒಂದು ಟೀಸ್ಪೂನ್ ತುಪ್ಪದೊಂದಿಗೆ ಕಂದು ಬಣ್ಣ ಬರುವವರೆಗೆ ಹುರಿದು ಜೊತೆಗೆ ಏಲಕ್ಕಿ ಪುಡಿಯನ್ನು ಹಾಕಿ ಚೆನ್ನಾಗಿ ಮಿಶ್ರಣ ಮಾಡಿಕೊಂಡರೆ ರುಚಿಕರವಾದ ಕಾಶಿ ಹಲ್ವಾ ಸವಿಯಲು ಸಿದ್ಧ.

# ಇರಾಕ್ ಮರುಭೂಮಿಯಲ್ಲಿ ಇಸ್ರೇಲ್‌ನ ರಹಸ್ಯ ಮಿಲಿಟರಿ ನೆಲೆ ಪತ್ತೆ



ಅಮೇರಿಕಾ : ಇರಾಕ್‌ನ ಪಶ್ಚಿಮ ಮರುಭೂಮಿಯ ಅಂತರಾಳದಲ್ಲಿ ಅಡಗಿದ್ದ ಇಸ್ರೇಲ್‌ನ ಬೃಹತ್ ರಹಸ್ಯ ಮಿಲಿಟರಿ ಕಾರ್ಯಾಚರಣೆಯೊಂದು ಈಗ ಜಗತ್ತಿನ ಮುಂದೆ ಬಯಲಾಗಿದೆ. ಇರಾನ್ ವಿರುದ್ಧದ ವಾಯು ದಾಳಿಯನ್ನು ತೀವ್ರಗೊಳಿಸುವ ಉದ್ದೇಶದಿಂದ ಇರಾಕ್ ಸರ್ಕಾರಕ್ಕೂ ಸುಳಿವು ನೀಡದೆ ಇಸ್ರೇಲ್ ಅಲ್ಲಿ ತನ್ನ ಮಿಲಿಟರಿ ನೆಲೆಯನ್ನು ಸ್ಥಾಪಿಸಿತ್ತು ಎಂಬ ಬೆಚ್ಚಿಬೀಳಿಸುವ ಮಾಹಿತಿಯನ್ನು ಅಮೆರಿಕದ ಅಧಿಕಾರಿಗಳೇ ಖಚಿತಪಡಿಸಿದ್ದಾರೆ ಎಂದು ಅಂತಾರಾಷ್ಟ್ರೀಯ ಮಾಧ್ಯಮ ವರದಿ ಹೇಳಿದೆ. ಮರುಭೂಮಿಯಲ್ಲಿ ಕುರಿ ಮೇಯಿಸುತ್ತಿದ್ದ ಸ್ಥಳೀಯ ಕುರಿಗಾಹಿಯೊಬ್ಬನಿಗೆ ಹೆಲಿಕಾಪ್ಟರ್‌ಗಳ ನಿಗೂಢ ಹಾರಾಟ ಕಂಡುಬಂದಿದ್ದೇ ಈ ರಹಸ್ಯ ಬಯಲಾಗಲು ಕಾರಣವಾಯಿತು. ಆತ ನೀಡಿದ ಮಾಹಿತಿಯ ಮೇರೆಗೆ ಇರಾಕ್ ಮಿಲಿಟರಿ ತನಿಖೆ ನಡೆಸಿದಾಗ, ಅಲ್ಲಿ ಇಸ್ರೇಲ್‌ನ ವಿಶೇಷ ಪಡೆಗಳು ಬೀಡುಬಿಟ್ಟಿರುವುದು ಪತ್ತೆಯಾಗಿದೆ. ಈ ರಹಸ್ಯ ನೆಲೆಯು ಇಸ್ರೇಲ್ ವಾಯುಪಡೆಗೆ ಇಂಧನ ಮರುಪೂರಣ ಮತ್ತು ತಾಂತ್ರಿಕ ನೆರವು ನೀಡುವ ಲಜಿಸ್ಟಿಕಲ್ ಹಬ್ ಆಗಿ ಕಾರ್ಯ ನಿರ್ವಹಿಸುತ್ತಿತ್ತು.

# ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಚೀನಾ ಭೇಟಿ



ಬೀಜಿಂಗ್: ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರ ಆಹ್ವಾನದ ಮೇರೆಗೆ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರು ಮೇ 13 ರಿಂದ 15 ರವರೆಗೆ ಚೀನಾಕ್ಕೆ ಅಧಿಕೃತ ಭೇಟಿ ನೀಡಲಿದ್ದಾರೆ ಎಂದು ಚೀನಾದ ವಿದೇಶಾಂಗ ಸಚಿವಾಲಯದ ವಕ್ತಾರರು ಸೋಮವಾರ ಪ್ರಕಟಿಸಿದ್ದಾರೆ. ಸುಮಾರು ಒಂಬತ್ತು ವರ್ಷಗಳ ದೀರ್ಘ ಅವಧಿಯ ನಂತರ ಅಮೆರಿಕ ಅಧ್ಯಕ್ಷರೊಬ್ಬರು ಚೀನಾಕ್ಕೆ ಭೇಟಿ ನೀಡುತ್ತಿರುವುದು ವಿಶೇಷವಾಗಿದ್ದು, ದೀರ್ಘಾವಧಿಯ ಅಮೆರಿಕ –ಇಸ್ರೇಲ್–ಇರಾನ್ ಯುದ್ಧ ಹಾಗೂ ಹಾರ್ಮುಜ್ ಜಲಸಂಧಿಯ ದಿಗ್ಬಂಧನದಿಂದ ಉಂಟಾಗಿರುವ ಜಾಗತಿಕ ಇಂಧನ ಬಿಕ್ಕಟ್ಟಿನ ಹಿನ್ನೆಲೆಯಲ್ಲಿ ಈ ಪ್ರವಾಸವು ಭಾರಿ ರಾಜತಾಂತ್ರಿಕ ಮಹತ್ವವನ್ನು ಪಡೆದುಕೊಂಡಿದೆ. ಅಮೆರಿಕದ ಪ್ರಧಾನ ಉಪ ಪತ್ರಿಕಾ ಕಾರ್ಯದರ್ಶಿ ಅನ್ನಾ ಕೆಲ್ಲಿ ಈ ಭೇಟಿಯನ್ನು 'ಮಹಾನ್ ಸಾಂಕೇತಿಕ ಮಹತ್ವದ ಭೇಟಿ' ಎಂದು ಬಣ್ಣಿಸಿದ್ದಾರೆ.

# ಹಾರ್ಮುಜ್ ಜಲಸಂಧಿಯಲ್ಲಿ ಭಾರತೀಯ ಹಡಗು ದುರಂತ



ಟೆಹರಾನ್ : ಪರ್ಷಿಯನ್ ಕೊಲ್ಲಿ ಮತ್ತು ಓಮನ್ ಕೊಲ್ಲಿಯನ್ನು ಸಂಪರ್ಕಿಸುವ ಆಯಕಟ್ಟಿನ ಪ್ರದೇಶವಾದ ಹಾರ್ಮುಜ್ ಜಲಸಂಧಿಯ ಬಳಿ ಸಂಭವಿಸಿದ ಭೀಕರ ಹಡಗು ಅಪಘಾತದಲ್ಲಿ ಓರ್ವ ಭಾರತೀಯ ನಾವಿಕ ಮೃತಪಟ್ಟಿದ್ದು, ಹಲವರು ಗಾಯಗೊಂಡಿದ್ದಾರೆ ಎಂದು ಸರ್ಕಾರಿ ಮೂಲಗಳು ಖಚಿತಪಡಿಸಿವೆ. ಸಾಮಾನ್ಯ ಸರಕುಗಳನ್ನು ಸಾಗಿಸುತ್ತಿದ್ದ ಈ ಹಡಗಿನಲ್ಲಿದ್ದ ಮರದ ದೋಣಿಯಲ್ಲಿ ಆಕಸ್ಮಿಕವಾಗಿ ಬೆಂಕಿ ಕಾಣಿಸಿಕೊಂಡು, ಬಳಿಕ ಹಡಗು ಮಗುಚಿ ಬಿದ್ದಿದ್ದೇ ಈ ದುರಂತಕ್ಕೆ ಕಾರಣ ಎನ್ನಲಾಗಿದೆ. ಈ ಘಟನೆಯ ಸಂದರ್ಭದಲ್ಲಿ ಹಡಗಿನಲ್ಲಿ ಒಟ್ಟು 18 ಭಾರತೀಯ ಸಿಬ್ಬಂದಿಗಳಿದ್ದರು. ಈ ಪೈಕಿ 17 ಜನರನ್ನು ಆ ಮಾರ್ಗವಾಗಿ ಸಾಗುತ್ತಿದ್ದ ಮತ್ತೊಂದು ಹಡಗಿನ ಸಿಬ್ಬಂದಿ ಸಮಯಪ್ರಜ್ಞೆ ಮೆರೆದು ರಕ್ಷಿಸಿದ್ದಾರೆ. ಘಟನೆಯಲ್ಲಿ ನಾಲ್ವರು ನಾವಿಕರು ತೀವ್ರವಾಗಿ ಸುಟ್ಟ ಗಾಯಗಳಿಗೆ ಒಳಗಾಗಿದ್ದು, ಅವರಿಗೆ ದುಬೈನಲ್ಲಿ ಚಿಕಿತ್ಸೆ ನೀಡಲಾಗುತ್ತಿದೆ.

# ಟ್ರಂಪ್ ಜಾಗತಿಕ ಸುಂಕಗಳನ್ನು ರದ್ದುಗೊಳಿಸಿದ ಫೆಡರಲ್ ನ್ಯಾಯಾಲಯ



ಅಮೇರಿಕ : ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಅವರ ಮಹತ್ವಾಕಾಂಕ್ಷೆಯ ಆರ್ಥಿಕ ನೀತಿಗೆ ತೀವ್ರ ಹಿನ್ನಡೆಯಾಗಿದ್ದು, ಅವರು ವಿಧಿಸಿದ್ದ 10% ಜಾಗತಿಕ ಸುಂಕಗಳನ್ನು ಫೆಡರಲ್ ನ್ಯಾಯಾಲಯವು ಕಾನೂನುಬಾಹಿರ ಎಂದು ಘೋಷಿಸಿದೆ. ಯುಎಸ್ ಅಂತಾರಾಷ್ಟ್ರೀಯ ವ್ಯಾಪಾರ ನ್ಯಾಯಾಲಯದ ಮೂವರು ನ್ಯಾಯಾಧೀಶರ ಪೀಠವು 2–1 ಮತಗಳ ಅಂತರದಿಂದ ಈ ಮಹತ್ವದ ತೀರ್ಪು ನೀಡಿದ್ದು, 1974ರ ವ್ಯಾಪಾರ ಕಾಯ್ದೆಯ ಸೆಕ್ಷನ್ 122ರ ಅಡಿಯಲ್ಲಿ ಇಂತಹ ಸುಂಕಗಳನ್ನು ವಿಧಿಸಲು ಆಡಳಿತ ಮಂಡಳಿಗೆ ಸಾಕಷ್ಟು ಆಧಾರಗಳಿಲ್ಲ ಎಂದು ಸ್ಪಷ್ಟಪಡಿಸಿದೆ. ಕಾಂಗ್ರೆಸ್ ಅನುಮೋದನೆಯಿಲ್ಲದೆ ಎಲ್ಲಾ ಆಮದುಗಳ ಮೇಲೆ ಸುಂಕ ಹೇರಲು ಸರ್ಕಾರ ಪ್ರಯತ್ನಿಸಿರುವುದು ಕಾನೂನುಬಾಹಿರ ಎಂದು ಸಿಎನ್‌ಎನ್ ವರದಿ ಮಾಡಿದೆ. ಈ ತೀರ್ಪಿನ ಪ್ರಕಾರ, ಮೊಕದ್ದಮೆ ಹೂಡಿರುವ ಕಂಪನಿಗಳಿಗೆ ಇನ್ನು ಮುಂದೆ ಸುಂಕ ಅನ್ವಯಿಸುವುದಿಲ್ಲ ಮತ್ತು ಅವರಿಂದ ಈ ಹಿಂದೆ ಸಂಗ್ರಹಿಸಲಾದ ಹಣವನ್ನು ಸರ್ಕಾರ ಮರುಪಾವತಿಸಬೇಕಾಗುತ್ತದೆ.

# ವಿನೇಶ್ ಫೋಗಟ್ ಕನಸಿಗೆ ತಣ್ಣೀರು



ಹೈದರಾಬಾದ್ : 2024ರ ಪ್ಯಾರಿಸ್ ಒಲಿಂಪಿಕ್ಸ್‌ನಲ್ಲಿ ಕೇವಲ 100 ಗ್ರಾಂ ಅಧಿಕ ತೂಕದ ಕಾರಣಕ್ಕೆ ಪದಕದಿಂದ ವಂಚಿತರಾಗಿ ಇಡೀ ದೇಶವೇ ಮರುಗುವಂತೆ ಮಾಡಿದ್ದ ಅನುಭವಿ ಕುಸ್ತಿಪಟು ವಿನೇಶ್ ಫೋಗಟ್ ಅವರಿಗೆ ಈಗ ಮತ್ತೊಂದು ದೊಡ್ಡ ಹಿನ್ನಡೆಯಾಗಿದೆ. ಭಾರತೀಯ ಕುಸ್ತಿ ಒಕ್ಕೂಟ (ಫಾಈಖ) 2026ರ ಏಷ್ಯನ್ ಕ್ರೀಡಾಕೂಟಕ್ಕೆ ಪ್ರವೇಶ ಪಡೆಯಲು ಹೊಸ ಅರ್ಹತಾ ಮಾನದಂಡಗಳನ್ನು ಪ್ರಕಟಿಸಿದ್ದು, ಈ ಕಠಿಣ ನಿಯಮಗಳು ವಿನೇಶ್ ಫೋಗಟ್ ಅವರ ಪುನರಾಗಮನದ ಹಾದಿಗೆ ಮುಳ್ಳಾಗಿ ಪರಿಣಮಿಸಿವೆ. ಹೊಸ ನಿಯಮದ ಪ್ರಕಾರ, ಈ ಹಿಂದೆ ಅಂತರಾಷ್ಟ್ರೀಯ ಮಟ್ಟದಲ್ಲಿ ನೀಡಿದ ಯಾವುದೇ ಪ್ರದರ್ಶನಗಳನ್ನು ಪರಿಗಣನೆಗೆ ತೆಗೆದುಕೊಳ್ಳಲಾಗುವುದಿಲ್ಲ. ಬದಲಾಗಿ, 2025ರ ರಾಷ್ಟ್ರೀಯ ಕುಸ್ತಿ ಚಾಂಪಿಯನ್‌ಶಿಪ್ ಮತ್ತು 2026ರ ಫೆಡರೇಶನ್ ಕಪ್‌ನಲ್ಲಿ ಕಡ್ಡಾಯವಾಗಿ ಪದಕ ಗೆದ್ದ ಕುಸ್ತಿಪಟುಗಳು ಮಾತ್ರ ಏಷ್ಯನ್ ಗೇಮ್ಸ್ ಟ್ರಯಲ್ಸ್‌ನಲ್ಲಿ ಭಾಗವಹಿಸಲು ಅರ್ಹತೆ ಪಡೆಯಲಿದ್ದಾರೆ.

# ನ್ಯಾಟೋ ವಿರುದ್ಧ ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ಕಿಡಿ



ವಾಷಿಂಗ್ಟನ್ : ಇರಾನ್ ಮಿಲಿಟರಿಯನ್ನು ಈಗಾಗಲೇ ದುರ್ಬಲಗೊಳಿಸಲಾಗಿದೆ ಮತ್ತು ಅಮೆರಿಕವು ಈ ಸಂಘರ್ಷವನ್ನು ಶಾಂತಿಯುತವಾಗಿ ಅಥವಾ ಬೇರೆ ಯಾವುದೇ ಮಾರ್ಗದ ಮೂಲಕ ಗೆಲ್ಲಲಿದೆ ಎಂದು ಅಮೆರಿಕ ಅಧ್ಯಕ್ಷ ಡೊನಾಲ್ಡ್ ಟ್ರಂಪ್ ವಿಶ್ವಾಸ ವ್ಯಕ್ತಪಡಿಸಿದ್ದಾರೆ. ಚೀನಾ ಪ್ರವಾಸಕ್ಕೆ ತೆರಳುವ ಮುನ್ನ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಇರಾನ್ ವಿಚಾರದಲ್ಲಿ ನಮಗೆ ಚೀನಾ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರ ಹಸ್ತಕ್ಷೇಪವಾಗಲಿ ಅಥವಾ ಇತರರ ಸಹಾಯವಾಗಲಿ ಅಗತ್ಯವಿಲ್ಲ ಎಂದು ಸ್ಪಷ್ಟಪಡಿಸಿದರು. ಇದೇ ಸಂದರ್ಭದಲ್ಲಿ ನ್ಯಾಟೋ ಮೈತ್ರಿಕೂಟದ ವಿರುದ್ಧ ತೀವ್ರ ಅಸಮಾಧಾನ ಹೊರಹಾಕಿದ ಟ್ರಂಪ್, "ನಮಗೆ ಅಗತ್ಯವಿದ್ದಾಗ ನ್ಯಾಟೋ ನೆರವಿಗೆ ಬರಲಿಲ್ಲ. ಈಗ ನಮಗೆ ನ್ಯಾಟೋದ ಅಗತ್ಯವೂ ಇಲ್ಲ," ಎಂದರು.

# ನಾಯಕತ್ವ ಬದಲಾವಣೆ ಗೊಂದಲ ಒಂದು ತಿಂಗಳಲ್ಲಿ ಇತ್ಯರ್ಥ..!



ಬೆಂಗಳೂರು : ರಾಜ್ಯ ರಾಜಕಾರಣದಲ್ಲಿ ತೀವ್ರ ಕುತೂಹಲ ಕೆರಳಿಸಿರುವ ಸಚಿವ ಸಂಪುಟ ಪುನಾರಚನೆ ಹಾಗೂ ನಾಯಕತ್ವ ಬದಲಾವಣೆಯ ಕುರಿತಾದ ಗೊಂದಲಗಳು ಇನ್ನು ಒಂದು ತಿಂಗಳ ಒಳಗಾಗಿ ಬಗೆಹರಿಯಲಿವೆ ಎಂದು ಆಹಾರ ಮತ್ತು ನಾಗರಿಕ ಸರಬರಾಜು ಸಚಿವ ಕೆ.ಹೆಚ್. ಮುನಿಯಪ್ಪ ಅವರು ತಿಳಿಸಿದ್ದಾರೆ. ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಈ ವಿಚಾರದಲ್ಲಿ ಹೈಕಮಾಂಡ್ ಅಂತಿಮ ತೀರ್ಮಾನ ತೆಗೆದುಕೊಳ್ಳಲಿದೆ. ಪ್ರಸ್ತುತ ನಾಯಕರು ಮುಂದುವರಿಯುತ್ತಾರಾ ಅಥವಾ ಬದಲಾವಣೆಯಾಗುತ್ತಾರಾ ಎಂಬ ಬಗ್ಗೆ ಹೈಕಮಾಂಡ್ ಶೀಘ್ರದಲ್ಲೇ ಸ್ಪಷ್ಟನೆ ನೀಡಲಿದೆ ಎಂದು ಹೇಳಿದರು.

# ರಾಜ್ಯದ ನಾಲ್ಕು ಸಾರಿಗೆ ನಿಗಮಗಳ ನೌಕರರಿಗೆ ಸಿಹಿ ಸುದ್ದಿ




ಬೆಂಗಳೂರು: ರಾಜ್ಯದ ಸಾರಿಗೆ ಸಂಸ್ಥೆಯ ನೌಕರರ ದೀರ್ಘಕಾಲದ ಬೇಡಿಕೆಗೆ ಕೊನೆಗೂ ಸ್ಪಂದಿಸಿರುವ ರಾಜ್ಯ ಸರ್ಕಾರ, ನಾಲ್ಕು ರಸ್ತೆ ಸಾರಿಗೆ ನಿಗಮಗಳ ಎಲ್ಲಾ ವೇತನ ಶ್ರೇಣಿಯ ನೌಕರರ ವೇತನವನ್ನು ಶೇ. 12.50ರಷ್ಟು ಹೆಚ್ಚಿಸಿ ಇಂದು ಮಹತ್ವದ ಆದೇಶ ಹೊರಡಿಸಿದೆ. ಏ.1,2025ರಿಂದ ಪೂರ್ವಾನ್ವಯವಾಗುವಂತೆ ಕರ್ನಾಟಕ ರಸ್ತೆ ಸಾರಿಗೆ ನಿಗಮಗಳ (KKRTC) ಅಧಿಕಾರಿಗಳು ಮತ್ತು ನೌಕರ ರ ವೇತನ ಪರಿಷ್ಕರಣೆಯಾಗಲಿದೆ. ಈ ನೂತನ ಆದೇಶದ ಅನ್ವಯ 2025ರ ಮಾರ್ಚ್ 31ರಂದು ನೌಕರರು ಪಡೆಯುತ್ತಿದ್ದ ಮೂಲವೇತನಕ್ಕೆ ಶೇ. 12.50ರಷ್ಟು ಹೆಚ್ಚಳವಾಗಲಿದ್ದು, ಆಯ್ಕೆ ಶ್ರೇಣಿ ಸೇರಿದಂತೆ ಎಲ್ಲಾ ವೇತನ ಶ್ರೇಣಿಗಳು ಪರಿಷ್ಕೃತಗೊಳ್ಳಲಿವೆ.

# ಜಿಬಿಎ ಚುನಾವಣೆ ವಿಳಂಬ: ಸುಪ್ರೀಂ ಕೋರ್ಟ್ ಮೆಟ್ಟಿಲು




ಬೆಂಗಳೂರು : ನಗರದ ಆಡಳಿತ ಸುಧಾರಣೆಯ ಮಹತ್ವಾಕಾಂಕ್ಷೆಯ ಜಿಬಿಎ ಮತದಾನ ಪ್ರಕ್ರಿಯೆಯನ್ನು ಸದ್ಯಕ್ಕೆ ಮುಂದೂಡಲು ಆಡಳಿತಾರೂಢ ಕಾಂಗ್ರೆಸ್ ಸರ್ಕಾರ ಗಂಭೀರ ಕಸರತ್ತು ನಡೆಸುತ್ತಿದೆ. ರಾಜ್ಯ ಚುನಾವಣಾ ಆಯೋಗವು ಮುಂಬರುವ ಜೂನ್ ತಿಂಗಳೊಳಗೆ ಚುನಾವಣಾ ದಿನಾಂಕವನ್ನು ಘೋಷಿಸಲು ಸಿದ್ಧತೆ ನಡೆಸುತ್ತಿದ್ದರೆ, ಇತ್ತ ರಾಜ್ಯ ಸರ್ಕಾರವು ಪೂರ್ವಸಿದ್ಧತೆಗಳ ಕೊರತೆಯನ್ನು ಮುಂದಿಟ್ಟುಕೊಂಡು ಕನಿಷ್ಠ ನಾಲ್ಕು ತಿಂಗಳ ಕಾಲಾವಕಾಶ ಕೋರಿ ಸರ್ವೋಚ್ಚ ನ್ಯಾಯಾಲಯದ ಮೊರೆ ಹೋಗಲು ನಿರ್ಧರಿಸಿದೆ. ಸದ್ಯದ ಪರಿಸ್ಥಿತಿಯಲ್ಲಿ ಚುನಾವಣೆ ಎದುರಿಸುವುದು ಬೇಡವೆಂಬ ಡಿ.ಕೆ. ಶಿವಕುಮಾರ್ ಅವರ ನಿಲುವಿಗೆ ಬೆಂಗಳೂರು ನಗರದ ಬಹುತೇಕ ಸಚಿವರು ಬೆಂಬಲ ಸೂಚಿಸಿದ್ದಾರೆ.

# ಶೃಂಗೇರಿ ಚುನಾವಣೆ ಫಲಿತಾಂಶಕ್ಕೆ ಸುಪ್ರೀಂಕೋರ್ಟ್ ತಡೆ



ಶೃಂಗೇರಿ : ಶೃಂಗೇರಿ ವಿಧಾನಸಭಾ ಕ್ಷೇತ್ರದ ಅಂಚೆ ಮತಗಳ ಮರುಎಣಿಕೆ ಪ್ರಕ್ರಿಯೆ ಮತ್ತು ಬಿಜೆಪಿ ಅಭ್ಯರ್ಥಿಯ ಗೆಲುವನ್ನು ಪ್ರಶ್ನಿಸಿ ಮಾಜಿ ಶಾಸಕ ಟಿ.ಡಿ. ರಾಜೇಗೌಡ ಅವರು ಸಲ್ಲಿಸಿದ್ದ ಅರ್ಜಿಯ ವಿಚಾರಣೆ ನಡೆಸಿದ ಸುಪ್ರೀಂ ಕೋರ್ಟ್ ಇಂದು ಮಹತ್ವದ ಆದೇಶ ನೀಡಿದೆ. ಪ್ರಕರಣದಲ್ಲಿ 'ಯಥಾಸ್ಥಿತಿ' ಕಾಯ್ದುಕೊಳ್ಳುವಂತೆ ಸುಪ್ರೀಂಕೋರ್ಟ್ ಸೂಚಿಸಿರುವುದರಿಂದ, ಬಿಜೆಪಿ ಅಭ್ಯರ್ಥಿ ಡಿ.ಎನ್. ಜೀವರಾಜ್ ಅವರು ಶಾಸಕನಾಗಿ ಪ್ರಮಾಣವಚನ ಸ್ವೀಕರಿಸಿದ ಕೇವಲ ಒಂದೇ ವಾರದಲ್ಲಿ ತಮ್ಮ ಸ್ಥಾನವನ್ನು ಕಳೆದುಕೊಳ್ಳುವಂತಾಗಿದೆ. ಈ ಬೆಳವಣಿಗೆಯಿಂದಾಗಿ ಶೃಂಗೇರಿ ಕ್ಷೇತ್ರದಲ್ಲಿ ರಾಜಕೀಯ ಹಗ್ಗಜಗ್ಗಾಟ ತೀವ್ರಗೊಂಡಿದೆ.

# ವೀರಪ್ಪನ್ ಹತ್ಯೆ ಕಾರ್ಯಾಚರಣೆಯ ಸಿಬ್ಬಂದಿಗಳಿಗೆ ಬಿಗ್ ರಿಲೀಫ್



ಬೆಂಗಳೂರು : ದಶಕಗಳ ಕಾಲ ಕರುನಾಡು ಮತ್ತು ತಮಿಳುನಾಡಿನ ಅರಣ್ಯ ಪ್ರದೇಶದಲ್ಲಿ ಅಧಿಪತ್ಯ ಸ್ಥಾಪಿಸಿದ್ದ ಕಾಡುಗಳ್ಳ ವೀರಪ್ಪನ್ ಹತ್ಯೆಯಾಗಿ ಸುಮಾರು 22 ವರ್ಷಗಳೇ ಕಳೆಯುತ್ತಾ ಬಂದಿದ್ದರೂ, ಆ ಕಾರ್ಯಾಚರಣೆಯಲ್ಲಿ ಪ್ರಾಣದ ಹಂಗು ತೊರೆದು ಹೋರಾಡಿದ್ದ ಅನೇಕ ಸಿಬ್ಬಂದಿಗೆ ಸರ್ಕಾರ ಘೋಷಿಸಿದ್ದ ಬಹುಮಾನ ಮಾತ್ರ ಇನ್ನೂ ತಲುಪಿರಲಿಲ್ಲ. ಈ ಸುದೀರ್ಘ ಕಾಯುವಿಕೆಗೆ ಈಗ ಕರ್ನಾಟಕ ಹೈಕೋರ್ಟ್ ಅಂತ್ಯ ಹಾಡಿದ್ದು, ಬಾಕಿ ಉಳಿದಿರುವ 72 ಎಸ್‌ಟಿಎಫ್ ಸಿಬ್ಬಂದಿಗೆ 3ತಿಂಗಳ ಒಳಗಾಗಿ ಬಹುಮಾನದ ಮೊತ್ತ ಪಾವತಿಸುವಂತೆ ರಾಜ್ಯಸರ್ಕಾರ ಹಾಗೂಅರಣ್ಯ ಇಲಾಖೆಗೆ ಮಹತ್ವದ ನಿರ್ದೇಶನ ನೀಡಿದೆ.

# ತೃಣಮೂಲ ಕಾಂಗ್ರೆಸ್‌ಗೆ ಸೋಲಿನ ಬೆನ್ನಲ್ಲೇ ಬಂಡಾಯದ ಬಿಸಿ..!



ಕೋಲ್ಕತ್ತಾ: ಪಶ್ಚಿಮ ಬಂಗಾಳ ವಿಧಾನಸಭಾ ಚುನಾವಣೆಯಲ್ಲಿ ಎದುರಾದ ಹೀನಾಯ ಸೋಲಿನ ಬೆನ್ನಲ್ಲೇ ತೃಣಮೂಲ ಕಾಂಗ್ರೆಸ್ (ಟಿಎಂಸಿ) ಪಕ್ಷದಲ್ಲಿ ಆಂತರಿಕ ಕಲಹ ಸ್ಫೋಟ ಗೊಂಡಿದೆ. ಮಾಜಿ ಮುಖ್ಯಮಂತ್ರಿ ಮಮತಾ ಬ್ಯಾನರ್ಜಿ ಮತ್ತು ಅಭಿಷೇಕ್ ಬ್ಯಾನರ್ಜಿ ನೇತೃತ್ವದ ವಿರುದ್ಧ ಪಕ್ಷದ ನಾಯಕರೇ ಈಗ ಬಹಿರಂಗವಾಗಿ ತಿರುಗಿಬಿದ್ದಿದ್ದಾರೆ. ಪಕ್ಷ ವಿ ರೋಧಿ ಚಟುವಟಿಕೆಗಳ ಆರೋಪದ ಮೇಲೆ ಟಿಎಂಸಿ ತನ್ನ ಮೂವರು ಪ್ರಮುಖ ವಕ್ತಾರ ರನ್ನು 6ವರ್ಷಅಮಾನತುಗೊಳಿಸಿದ್ದು ರಾಜ್ಯ ರಾಜಕಾರಣದಲ್ಲಿ ತಲ್ಲಣ ಸೃಷ್ಟಿಸಿದೆ. ಪಕ್ಷದ ಅಧಿಕೃತ ಧ್ವನಿಯಾಗಿ ಗುರುತಿಸಿಕೊಂಡಿದ್ದ ವಕ್ತಾರ ರಿಜು ದತ್ತಾ ಅವರ ನಡೆ ಎಲ್ಲರನ್ನೂ ಬೆರಗುಗೊಳಿಸಿದೆ.

# ತಮಿಳುನಾಡಿನಲ್ಲಿ ಮದ್ಯದ ಅಂಗಡಿ ಮುಚ್ಚಲು ಆದೇಶ




ಚೆನ್ನೈ : ತಮಿಳುನಾಡು ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಎರಡೇ ದಿನದಲ್ಲಿ ನಟ, ರಾಜಕಾರಣಿ ಸಿ. ಜೋಸೆಫ್ ವಿಜಯ್ ಅವರು ರಾಜ್ಯದ ಮದ್ಯದ ನೀತಿಯಲ್ಲಿ ಮಹತ್ವದ ಬದಲಾವಣೆ ತರುವ ಮೂಲಕ ಐತಿಹಾಸಿಕ ನಿರ್ಧಾರ ಕೈಗೊಂಡಿದ್ದಾರೆ. ಸಾರ್ವಜನಿಕ ಹಿತದೃಷ್ಟಿಯಿಂದ ರಾಜ್ಯದಾದ್ಯಂತ ಇರುವ 717 ಸರ್ಕಾರಿ ಸ್ವಾಮ್ಯದ ಟಾಸ್ಮಾಕ್ (ಖಿಂಖಿಒಂಅ) ಮದ್ಯದ ಮಳಿಗೆಗಳನ್ನು ಮುಚ್ಚುವಂತೆ ಸರ್ಕಾರ ಅಧಿಕೃತ ಆದೇಶ ಹೊರಡಿಸಿದೆ. ಮುಖ್ಯಮಂತ್ರಿಯಾಗಿ ಪ್ರಮಾಣವಚನ ಸ್ವೀಕರಿಸಿದ ಕೂಡಲೇ ಧಾರ್ಮಿಕ ಸ್ಥಳಗಳು, ಶೈಕ್ಷಣಿಕ ಸಂಸ್ಥೆಗಳು ಮತ್ತು ಸಾರ್ವಜನಿಕ ನಿಲ್ದಾಣಗಳ ಬಳಿ ಇರುವ ಮದ್ಯದ ಅಂಗಡಿಗಳ ಬಗ್ಗೆ ಸಮೀಕ್ಷೆ ನಡೆಸಿ ವರದಿ ನೀಡುವಂತೆ ವಿಜಯ್ ಸೂಚಿಸಿದ್ದರು.

# ಜುಲೈ 1ರಿಂದ ವಿಕಸಿತ ಭಾರತ ರೋಜ್‌ಗಾರ್ ಜಾರಿ




ನವದೆಹಲಿ : ಮಹಾತ್ಮ ಗಾಂಧಿ ಗ್ರಾಮೀಣ ಉದ್ಯೋಗ ಖಾತರಿ ಯೋಜನೆ (ನರೇಗಾ) ಇತಿಹಾಸದ ಪುಟ ಸೇರಲಿದ್ದು, ಅದರ ಬದಲಿಗೆ ಹೊಸದಾಗಿ ರೂಪಿಸಲಾಗಿರುವ 'ವಿಕಸಿತ ಭಾರತ ರೋಜ್‌ಗಾರ್ ಮತ್ತು ಅಜೀವಿಕಾ ಮಿಷನ್ (ಗ್ರಾಮೀಣ)' ಅಥವಾ 'ವಿಬಿ–ಜಿ–ರಾಮ್‌ಜಿ' ಕಾಯ್ದೆಯು ಜುಲೈ 1ರಿಂದ ದೇಶಾದ್ಯಂತ ಅನುಷ್ಠಾನಗೊಳ್ಳಲಿದೆ ಎಂದು ಕೇಂದ್ರ ಸರ್ಕಾರ ಸೋಮವಾರ ಮಹತ್ವದ ಘೋಷಣೆ ಮಾಡಿದೆ. ಈ ಸಂಬಂಧ ಗ್ರಾಮೀಣಾಭಿವೃದ್ಧಿ ಸಚಿವಾಲಯವು ಅಧಿಕೃತ ಅಧಿಸೂಚನೆ ಹೊರಡಿಸಿದ್ದು, ಜುಲೈ 1ರಿಂದ ಎಲ್ಲಾ ರಾಜ್ಯಗಳು ಮತ್ತು ಕೇಂದ್ರಾಡಳಿತ ಪ್ರದೇಶಗಳಲ್ಲಿ ಈ ಹೊಸ ಕಾಯ್ದೆ ಜಾರಿಗೆ ಬರಲಿದೆ ಎಂದು ಸ್ಪಷ್ಟಪಡಿಸಿದೆ.

# 'ವಂದೇ ಮಾತರಂ'ಗೆ ರಾಷ್ಟ್ರಗೀತೆಯ ಸ್ಥಾನಮಾನ: ಓವೈಸಿ ವಿರೋಧ




ಹೈದರಾಬಾದ್ : 'ವಂದೇ ಮಾತರಂ' ಗೀತೆಗೆ ರಾಷ್ಟ್ರಗೀತೆಯಷ್ಟೇ ಸಮಾನವಾದ ಕಾನೂನುಬದ್ಧ ಮಾನ್ಯತೆ ನೀಡುವ ಕೇಂದ್ರ ಸರ್ಕಾರದ ನಿರ್ಧಾರವನ್ನು ಎಐಎಂಐಎಂ ಅಧ್ಯಕ್ಷ ಅಸಾದುದ್ದೀನ್ ಒವೈಸಿ ಟೀಕಿಸಿದ್ದಾರೆ. ರಾಷ್ಟ್ರದ ಅಸ್ಮಿತೆಯು ದೇಶದ ಜನರು ಮತ್ತು ಸಂವಿಧಾನದಿಂದ ರೂಪುಗೊಳ್ಳಬೇಕೇ ಹೊರತು, ಅದನ್ನು ಯಾವುದೇ ಒಂದು ಧಾರ್ಮಿಕ ಪ್ರತೀಕಕ್ಕೆ ಸೀಮಿತಗೊಳಿಸುವುದು ಪ್ರಜಾಪ್ರಭುತ್ವದ ಆಶಯಗಳಿಗೆ ವಿರುದ್ಧವಾದುದು ಎಂದು ಅಭಿಪ್ರಾಯಪಟ್ಟಿದ್ದಾರೆ. ಆದರೆ 'ವಂದೇ ಮಾತರಂ' ಮೂಲತಃ ಧಾರ್ಮಿಕ ಸಂಕೇತಗಳನ್ನು ಒಳಗೊಂಡಿರುವುದರಿಂದ, ಅದನ್ನು ರಾಷ್ಟ್ರಗೀತೆ ಸಮಾನವಾಗಿ ಪರಿಗಣಿಸುವುದು ಸಂವಿಧಾನಬದ್ಧವಾಗಿ ಸರಿಯಲ್ಲ ಎಂದು ಪ್ರತಿಪಾದಿಸಿದ್ದಾರೆ.

# ಎಲ್ಲರಿಗಾಗಿ ಕೆಲಸ ಮಾಡುವುದು ಸರ್ಕಾರದ ಮಂತ್ರ–ಸುವೇಂದು ಅಧಿಕಾರಿ



ಪಶ್ಚಿಮ ಬಂಗಾಳ : ಪಶ್ಚಿಮ ಬಂಗಾಳದ ರಾಜಕೀಯ ಇತಿಹಾಸದಲ್ಲಿ ಹೊಸ ಅಧ್ಯಾಯವೊಂದು ಅಧಿಕೃತವಾಗಿ ತೆರೆದುಕೊಂಡಿದೆ. ರಾಜ್ಯದ ನೂತನ ಮುಖ್ಯಮಂತ್ರಿಯಾಗಿ ಅಧಿಕಾರ ಸ್ವೀಕರಿಸಿದ ಸುವೇಂದು ಅಧಿಕಾರಿ ಅವರು ಇಂದು ತಮ್ಮ ಮೊದಲ ಸಚಿವ ಸಂಪುಟ ಸಭೆಯನ್ನು ಯಶಸ್ವಿಯಾಗಿ ನಡೆಸಿದ್ದು, ರಾಜ್ಯದ ಸಮಗ್ರ ಅಭಿವೃದ್ಧಿ ಮತ್ತು ಆಡಳಿತಾತ್ಮಕ ಸುಧಾರಣೆಗೆ ಪೂರಕವಾದ ಹಲವು ಮಹತ್ವದ ನಿರ್ಧಾರಗಳನ್ನು ಪ್ರಕಟಿಸಿದ್ದಾರೆ. ಸಭೆಯನ್ನು ಆರಂಭಿಸಿದ ಅವರು, 'ಎಲ್ಲರಿಗಾಗಿ ಕೆಲಸ ಮಾಡುವುದು ನಮ್ಮ ಸರ್ಕಾರದ ಮಂತ್ರ' ಎಂದು ಭರವಸೆ ನೀಡಿದರು. ಈ ಸಭೆಯ ಅತ್ಯಂತ ಪ್ರಮುಖ ತೀರ್ಮಾನವೆಂದರೆ ಗಡಿ ಭದ್ರತೆಗೆ ನೀಡಲಾದ ಆದ್ಯತೆ.

# ಚೌಗುಲೆ ಶಿಪ್‌ಯಾರ್ಡ್‌ನ ಮೊದಲ ಹಡಗು ಹಸ್ತಾಂತರ



ಬೆಂಗಳೂರು : ಹಡಗು ನಿರ್ಮಾಣ ಸಂಸ್ಥೆಯಾದ ಚೌಗುಲೆ ಶಿಪ್ ಯಾರ್ಡ್ಸ್ ತನ್ನ ನೂತನ ನಿರ್ಮಾಣದ ಮೊದಲ ಹಡಗು 'ಫ್ರೀಷಿಯನ್ ಫ್ಯೂಚರ್' ಅನ್ನು ನೆದರ್‌ಲ್ಯಾಂಡ್‌ನ ಬೂಮ್‌ಸ್ಮಾ ಸಂಸ್ಥೆಗೆ ಯಶಸ್ವಿಯಾಗಿ ಹಸ್ತಾಂತರಿಸಿದೆ. ಒಂದು ಕಾಲದಲ್ಲಿ ದೇಶದ ಅತಿದೊಡ್ಡ ಖಾಸಗಿ ಹಡಗು ನಿರ್ಮಾಣ ಘಟಕಗಳಲ್ಲಿ ಒಂದಾಗಿದ್ದ ಈ ಕೇಂದ್ರವು, ಬಳಿಕ ದಿವಾಳಿಯಾಗಿತ್ತು. ಆದರೆ ಚೌಗುಲೆ ಸಂಸ್ಥೆಯು ಈ ಘಟಕವನ್ನು ಖರೀದಿಸಿದ ಕೇವಲ ಮೂರು ವರ್ಷಗಳ ಅವಧಿಯಲ್ಲೇ ತನ್ನ ಮೊದಲ ಹಡಗನ್ನು ವಿತರಿಸಿ ಸಾಧನೆ ಮಾಡಿದೆ. 'ಫ್ರೀಷಿಯನ್ ಫ್ಯೂಚರ್' ಡೀಸೆಲ್ ಮತ್ತು ವಿದ್ಯುತ್ ಎರಡರಲ್ಲೂ ಸಂಚರಿಸಬಲ್ಲ
















KARAVALI THARANGINI Weekly Owned, Editor, Published & Printed by Lalithasri Preetham Rai No.2-64/54(12), Pushparaj Nilaya, Jayanagara, 3rd 'A' Maroli Village, Dakshina Kannada, Karnataka - 575005.
email: karavalitharangini@gmail.com, web: karavalitharangini.com ph: 9880109212 Printed at Bhima Samskruthi Printers & Publishers, No 1182 14th Main Road Prakash Nagar, Bengaluru Karnataka-560021